# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು : ಮಹೇಶ್ವರಿ ಭೀಮಶಿ ಭರಮಣ್ಣವರ
EDITOR : MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com

Volume: 01 | Issue : 23 | MONDAY 30-03-2026 | PRGI No : KNKAN/26/A0962 | Pages:4 Rs.2.00 | M: 9742418836


## 'ಧೈರ್ಯವಿದ್ದರೆ ಹಿಂದಿಯನ್ನು ರಾಷ್ಟ್ರಭಾಷೆ ಮಾಡಲಿ ನೋಡೋಣ; ಗ್ರೇಡಿಂಗ್ ವ್ಯವಸ್ಥೆ ತಂದಿರುವುದು ಮಕ್ಕಳ ಹಿತದೃಷ್ಟಿಯಿಂದ': ಸಚಿವ ಮಧು ಬಂಗಾರಪ್ಪ



ಬೆಂಗಳೂರು: ದ್ವಿಭಾಷಾ ಸೂತ್ರ ಅಳವಡಿಕೆಗೆ ನಮ್ಮ ಸರ್ಕಾರ ಒತ್ತು ನೀಡುತ್ತಿದೆ. ನಾವು ತೆಗೆದುಕೊಳ್ಳುವ ಯಾವ ನಿರ್ಧಾರಗಳು ಕೂಡ ಮಕ್ಕಳ ಹಿತದೃಷ್ಟಿಗೆ ತೊಂದರೆಯಾಗಬಾರದು, ಅವರ ಭವಿಷ್ಯಕ್ಕೆ ಮಾರಕವಾಗಬಾರದು, ಮಕ್ಕಳ ಶಿಕ್ಷಣಕ್ಕೆ ಒತ್ತಡ ಬೀಳಬಾರದು ಎಂದು ಗ್ರೇಡಿಂಗ್ ವ್ಯವಸ್ಥೆ ತಂದಿದ್ದೇವೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ದ್ವಿಭಾಷಾ ಸೂತ್ರ ಅಳವಡಿಕೆಗೆ ಒತ್ತು ನೀಡಲಾಗುತ್ತದೆ. ನಮ್ಮ ಭಾಷೆ, ನೆಲ-ಜಲಗಳನ್ನು ನಮ್ಮ ಪೂರ್ವಿಕರು ಕಾಪಾಡಿಕೊಂಡು ಬಂದಿದ್ದಾರೆ. ಗೋಕಾಕ್ ಚಳವಳಿಯಂತಹ ಚಳವಳಿಗಳಿಂದ ನಮಗೆ ಅನುಕೂಲ ಆಗಿದೆ. ನಮ್ಮ ರಾಜ್ಯದ ಮಕ್ಕಳ ಹಿತದೃಷ್ಟಿಯಿಂದ ನಾವು ಈ ನಿಯಮ ಜಾರಿಗೆ ತಂದಿದ್ದೇವೆ ಎಂದು ಹತ್ತನೇ ತರಗತಿಯಲ್ಲಿ ಮೂರನೇ ಭಾಷೆಗೆ ಗ್ರೇಡಿಂಗ್ ನೀಡುವ ರಾಜ್ಯ ಸರ್ಕಾರದ ಕ್ರಮವನ್ನು ಸಮರ್ಥಿಸಿಕೊಂಡರು.

ಅಧಿವೇಶನ ಮುಗಿದ ಬಳಿಕ ಮಾಡೋಣ ಅಂದುಕೊಂಡಿದ್ದೀವಿ. ಬೇರೆ ಬೇರೆ ಭಾಷೆ ದ್ವೇಷ ಮಾಡಬಾರದು. ಬೇರೆ ಭಾಷೆ ಹೇರಬಾರದು ಮಕ್ಕಳ ಮೇಲೆ ಒತ್ತಡ ಹಾಕಬಾರದು ದ್ವಿಭಾಷಾ ಸೂತ್ರ ಅಳವಡಿಕೆಯಿಂದ ಬಹಳ ಸಂತೋಷ ಆಗಿದೆ. ಸಾಹಿತಿ ಕನ್ನಡ ಪರ ಸಂಘಟನೆಗಳು ಮನವಿ ಮಾಡಿದ್ದವು. ಅವರ ಜೊತೆ ಚರ್ಚೆಮಾಡಿ ನಾವು ತೀರ್ಮಾನ ಮಾಡಿದ್ದೇವೆ. ಸಿಎಂ ಸಿದ್ದರಾಮಯ್ಯ ಜೊತೆ ಮಾತಾಡಿದ್ದೇವೆ ಎಂದರು.

ಈಗ ತಂದಿರುವ ಗ್ರೇಡಿಂಗ್ ವ್ಯವಸ್ಥೆ ಬಗ್ಗೆ ವಿಶಾಲವಾಗಿ ಚರ್ಚೆಯಾಗುತ್ತದೆ. ವಿಧಾನಸಭೆ ಅಧಿವೇಶನದಲ್ಲಿ ಮಂಡಿಸುತ್ತೇವೆ. ವಿಧಾನ ಪರಿಷತ್ ನಲ್ಲಿ ಒಪ್ಪಿಗೆ ಪಡೆದ ನಂತರವೇ ಕಾನೂನು ಜಾರಿಗೆ ಬರುವುದು ಎಂದರು.

ರಾಜ್ಯದ ಮಕ್ಕಳಿಗೆ ಒಳ್ಳೆಯದಾಗಬೇಕು ಅಷ್ಟೆ ಸರ್ಕಾರ ಹೆದರಿದ್ಯ ಅಂತಾ ಸುರೇಶ್ ಕುಮಾರ್ ಪ್ರಶ್ನಿಸಿದರು. ಶಿಕ್ಷಣ ಸಚಿವರಾಗಿದ್ದ ಸುರೇಶ್ ಕುಮಾರ್ ಅವರು ಅರ್ಥ ಮಾಡಿಕೊಳ್ಳಬೇಕು. ಕನ್ನಡಿಗರು ಸಾವಿರ ಭಾಷೆ ಕಲಿಯಲಿ, ಆದರೆ ಕನ್ನಡವನ್ನು ಕಡ್ಡಾಯವಾಗಿ ಓದಲಿ ಎಂದರು.

ಬಿವೈ ವಿಜಯೇಂದ್ರ ಪೋಸ್ಟ್ ಮಾಡಿದ್ದು ನೋಡಿದ್ದೇನೆ ಬಿಎಸ್ ವೈಗೆ ಇದ್ದ ಕನ್ನಡ ಅಭಿಮಾನ ವಿಜಯೇಂದ್ರ ಅರ್ಥ ಮಾಡಿಕೊಂಡರೆ ಒಳ್ಳೆಯದು ಎಂದರು.

## ಎಸ್ ಎಸ್ ಎಲ್ ಸಿ ಫಲಿತಾಂಶದಲ್ಲಿ ಹಿಂದಿಯನ್ನು ಪರಿಗಣಿಸದಿರಲು ತೀರ್ಮಾನ– ಮುಖ್ಯಮಂತ್ರಿ ಸಿದ್ದರಾಮಯ್ಯ



ಮೈಸೂರು: ಈ ವರ್ಷದಿಂದಲೇ ಎಸ್ ಎಸ್ ಎಲ್ ಸಿ ಫಲಿತಾಂಶದಲ್ಲಿ ತೃತೀಯ ಭಾಷೆ ಹಿಂದಿಯನ್ನು ಪರಿಗಣಿಸದಿರಲು ತೀರ್ಮಾನ ಕೈಗೊಂಡಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಮೈಸೂರಿನ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಶಿಕ್ಷಣದಲ್ಲಿ ದ್ವಿಭಾಷಾ ನೀತಿ ಜಾರಿ ಮತ್ತು ಖಾಸಗಿ ಶಾಲೆಗಳು ಈ ನಿರ್ಧಾರವನ್ನು ವಿರೋಧಿಸುತ್ತಿರುವ ಬಗ್ಗೆ ಪತ್ರಕರ್ತರಿಗೆ ಪ್ರತಿಕ್ರಿಯೆ ನೀಡಿ, ಈ ವರ್ಷದಿಂದಲೇ ತೃತೀಯ ಭಾಷೆ ಹಿಂದಿಯನ್ನು ಅಂಕಗಳಿಗೆ ಪರಿಗಣಿಸದೇ, ಎಸ್ ಎಸ್ ಎಲ್ ಸಿ ಯಲ್ಲಿ 625 ಅಂಕಗಳ ನ್ನು 525 ಕ್ಕೆ ನಿಗದಿಪಡಿಸಲು ತೀರ್ಮಾನಿ ಸಲಾಗಿದೆ . ಸರ್ಕಾರದ ಯಾವುದೇ ತೀರ್ಮಾ ನಕ್ಕೆ ಬೆಂಬಲ ಇಲ್ಲವೇ ವಿರೋಧವೂ ವ್ಯಕ್ತವಾಗಬಹುದು. ಹಿಂದಿ ಭಾಷೆಯನ್ನು ಕಲಿಯುವುದರಲ್ಲಿ ಸರ್ಕಾರದ ವಿರೋಧ ವಿಲ್ಲ , ಆದರೆ ಪರೀಕ್ಷೆ ಯ ಅಂಕಗಳಿಗೆ ಕಡ್ಡಾಯವಾಗಬಾರದು ಎಂದರು.

**ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವಿನ ವಿಶ್ವಾಸ**

ರಾಜ್ಯದಲ್ಲಿ ನಡೆಯಲಿರುವ ಉಪಚುನಾವಣೆಯ ಬಗ್ಗೆ ಪ್ರತಿಕ್ರಿಯಿಸಿ, ದಾವಣಗೆರೆ ಹಾಗೂ ಬಾಗಲಕೋಟೆಯ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸುವ ವಿಶ್ವಾಸವಿದ್ದು, ಸೋಮವಾರದಿಂದ ಪ್ರಚಾರ ಕಾರ್ಯದಲ್ಲಿ ಭಾಗಿಯಾಗಿ, ನಂತರ ಏಪ್ರಿಲ್ 5 ರಂದು ಕೇರಳ ರಾಜ್ಯದ ಚುನಾವಣೆಯ ಪ್ರಚಾರಕ್ಕೂ ತೆರಳುವುದಾಗಿ ತಿಳಿಸಿದರು. ಈ ಹಿಂದೆ ನಡೆದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸಿತ್ತು. ಇದು ನಮ್ಮ ಮುಂದಿನ ಗೆಲುವಿನ ದಿಕ್ಸೂಚಿಯಾಗಿದೆ. ದಾವಣೆಗೆರೆಯಲ್ಲಿ ಯಾವುದೇ ಗೊಂದಲವಿಲ್ಲ ಎಂದರು.

**ಉಪಚುನಾವಣೆಗೂ, ಸಿಎಂ ಸ್ಥಾನ ವಿಚಾರಕ್ಕೂ ಸಂಬಂಧವಿಲ್ಲ**

ಈ ಉಪಚುನಾವಣೆಗಳ ಗೆಲುವು, ಸಿಎಂ ಸ್ಥಾನದಲ್ಲಿ ಎದ್ದಿರುವ ಗೊಂದಲಕ್ಕೆ ತೆರೆ ಎಳೆಯಲಿದೆಯೇ ಎಂಬುದಕ್ಕೆ ಪ್ರತಿಕ್ರಯಿಸಿ, ಸಿಎಂ ಸ್ಥಾನ ವಿಚಾರಕ್ಕೂ , ಚುನಾವಣೆಗೂ ಯಾವುದೇ ಸಂಬಂಧವಿಲ್ಲ. ಪಕ್ಷದ ಹೈಕಮಾಂಡ್ ಅನುಮತಿಸಿದರೆ, ಇನ್ನೆರೆಡು ವರ್ಷವೂ ನಾನೇ ಬಜೆಟ್ ಮಂಡಿಸುತ್ತೇನೆ. ಹೈಕಮಾಂಡ್ ಸೂಚನೆಯ ಮೇರೆಗೆ ನಾವು ನಡೆಯುತ್ತೇವೆ ಎಂದರು.

**ಡ್ರಗ್ಸ್ ದಂಧೆ: ತಪ್ಪಿತಸ್ಥರ ವಿರುದ್ಧ ಕ್ರಮ**

ಮೈಸೂರಿನಲ್ಲಿ ಡ್ರಗ್ಸ್ ದಂಧೆಯ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ಸರ್ಕಾರ ರಾಜ್ಯದಲ್ಲಿ ಡ್ರಗ್ಸ್ ದಂಧೆಯ ವಿರುದ್ಧ ಸಮರ ಸಾರಿದೆ. ಕರ್ನಾಟಕವನ್ನು ಡ್ರಗ್ಸ್ ಮುಕ್ತಗೊಳಿಸುವುದು ನಮ್ಮ ಉದ್ದೇಶ. ಮೈಸೂರಿನಲ್ಲಿ ಡ್ರಗ್ಸ್ ಜಾಲವನ್ನು ಪತ್ತೆಹಚ್ಚಿರುವ ಬಗ್ಗೆ ತಿಳಿದುಬಂದಿದ್ದು, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದರು.

ಮೈಸೂರಿನಲ್ಲಿ ಟ್ರಾಫಿಕ್ ಸಿಗ್ನಲ್ ಗಳು ಹೆಚ್ಚಿ, ಜನರಿಗೆ ತೊಂದರೆ ಆಗುತ್ತಿರುವ ಬಗ್ಗೆ ದೂರುಗಳು ಬರುತ್ತಿರುವ ಬಗ್ಗೆ ಉತ್ತರಿಸಿ, ಟ್ರಾಫಿಕ್ ಸಿಗ್ನಲ್ ಗಳನ್ನು ಸುಗಮ ವಾಹನ ಸಂಚಾರಕ್ಕಾಗಿ ಅಳವಡಿಸಲಾಗಿದೆ. ಈ ಬಗ್ಗೆ ಮಾಹಿತಿ ಪಡೆದು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

## ಶಿಂದಿಕುರಬೇಟ ಗ್ರಾಮದಲ್ಲಿ ಪಾಂಡುರಂಗ ಸಪ್ತಾಹ ಪ್ರಾರಂಭ



**ಬೆಳವಾವಿ ವಾರ್ತೆ ಗೋಕಾಕ:** ತಾಲೂಕಿನ ಶಿಂದಿಕುರಬೇಟ ಗ್ರಾಮದಲ್ಲಿ 21ನೇ ವರ್ಷದ ಅಂಗವಾಗಿ ಶ್ರೀ ಶ್ರೇಷ್ಠ ಜ್ಞಾನೇಶ್ವರಿ ಪಾರಾಯಣ ಅಖಂಡ ಹರಿನಾಮ ಸೋಹಳಾ ಹಾಗೂ ಶ್ರೀ ವಿಠ್ಠಲ ರುಕ್ಮಿಣಿ ಸಪ್ತಾಹವು ದಿ.29ರಿಂದ 31ರವರೆಗೆ ಅತೀ ವಿಜೃಂಭಣೆಯಿಂದ ಜರುಗಲಿದೆ.ದಿ.29 ಮತ್ತು 30ರಂದು ಮುಂಜಾನೆ ಕಾಕಡಾರತಿ ಹಾಗೂ ಪೋಥೀ ವಾಚನ, ರಾಮಜಪ, ಹರಿಪಾಠ,ಕೀರ್ತನ ಜರುಗಲಿದೆ.ದಿ.31ರಂದು ಮುಂಜಾನೆ ಕಾಕಡಾರತಿ ನಂತರ ಶ್ರೀ ಜ್ಞಾನೇಶ್ವರಿ ಪಾರಾಯಣ ಸಮಾಪ್ತಿ,ದಿಂಡಿ ಸೋಹಳಾ, ಸುಮಂಗಲೆಯರ ಆರತಿಯೊಂದಿಗೆ ಶ್ರೀ ಪಾಂಡುರಂಗ ವಿಠ್ಠಲ ರುಕ್ಮಿಣಿಯರ ಪಲ್ಲಕ್ಕಿ ಉತ್ಸವ ನಂತರ ಮಧ್ಯಾಹ್ನ ಮಹಾಪ್ರಸಾದ ಜರುಗಲಿದೆ. ಘಟಪ್ರಭಾದ ಮಾರುತಿ ವಂಜೇರಿ ಇವರು ಪಾರಾಯಣ ನಡೆಸಿಕೊಡುವರು.ಶ್ರೀ ಬಾಳು ಮಹಾರಾಜ ಭೋಸಲೆ ಮತ್ತು ಮಾಣಿಕ್ ಬೀಸೆ ಇವರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ಸಪ್ತಾಹ ಕಮೀಟಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2028 ರಲ್ಲಿ ರಾಜ್ಯದಲ್ಲಿ ನಡೆಯುವ ಸಾರ್ವತ್ರಿಕ ಚುನಾವಣೆಯಲ್ಲಿ ಬಿಜೆಪಿ ಸಂಪೂರ್ಣ ಬಹುಮತದೊಂದಿಗೆ ಅಧಿಕಾರಕ್ಕೆ ಬರಲಿದೆ: ಅರಭಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ



**ಬೆಳವಾವಿ ವಾರ್ತೆ**

**ಗೋಕಾಕ್** 2028 ರಲ್ಲಿ ರಾಜ್ಯದಲ್ಲಿ ನಡೆಯುವ ಸಾರ್ವತ್ರಿಕ ಚುನಾವಣೆಯಲ್ಲಿ ಬಿಜೆಪಿ ಸಂಪೂರ್ಣ ಬಹುಮತದೊಂದಿಗೆ ಅಧಿಕಾರಕ್ಕೆ ಬರಲಿದೆ ಎಂದು ಅರಭಾವಿ ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ವಿಶ್ವಾಸ ವ್ಯಕ್ತಪಡಿಸಿದರು.

ಶುಕ್ರವಾರ ಸಂಜೆ ಇಲ್ಲಿನ ಹೊರ ವಲಯದ ಗೋಕಾಕ ಸಪ್ಲಾಯರ್ಸ್ ಸಭಾ ಭವನದಲ್ಲಿ ಅರಭಾವಿ ಬಿಜೆಪಿ ಮಂಡಲವು ಹಮ್ಮಿಕೊಂಡ ಪಂ. ದೀನ ದಯಾಳ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನದ ಎರಡನೇ ದಿನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಜನರ ಆಶೀರ್ವಾದದೊಂದಿಗೆ ಬಿಜೆಪಿ ಅಧಿಕಾರಕ್ಕೆ ಬಂದು ಸರ್ಕಾರ ರಚಿಸಲಿದೆ ಎಂದು ಹೇಳಿದರು.

ಶ್ಯಾಂ ಪ್ರಸಾದ ಮುಖರ್ಜಿ ಮತ್ತು ದೀನ ದಯಾಳ ಉಪಾಧ್ಯಾಯ ಅವರು ಹುಟ್ಟು ಹಾಕಿದ್ದ ಜನಸಂಘವು ಮುಂದೆ ಭಾರತೀಯ ಜನತಾ ಪಾರ್ಟಿಯಾಗಿ ಬದಲಾಯಿತು. ಭಾರತರತ್ನ ಅಟಲ್ ಬಿಹಾರಿ ವಾಜಪೇಯಿ, ಲಾಲ್ ಕೃಷ್ಣ ಅಡ್ವಾಣಿ, ಡಾ. ಮುರಳಿ ಮನೋಹರ ಜೋಷಿ ಅವರು 80 ರ ದಶಕದಲ್ಲಿ ಪಕ್ಷವನ್ನು ಮುನ್ನೆಡೆಸಿದರು.

ಆರಂಭದಲ್ಲಿ ಕೇವಲ ಇಬ್ಬರು ಸಂಸತ್ ಸದಸ್ಯರನ್ನು ಹೊಂದಿದ್ದ ಪಕ್ಷವು ಹೊರಡಿಸಿದ್ದ ಚುನಾವಣಾ ಪ್ರಣಾಳಿಕೆ ಬಗ್ಗೆ ವಿರೋಧಿಗಳು ವ್ಯಂಗ್ಯಭರೀತ ಮಾತುಗಳನ್ನಾಡುತ್ತಿದ್ದರು. ಆದರೆ, ಕಾಲ ಕ್ರಮೇಣ ಇಡೀ ದೇಶದ ಮೂಲೆ–ಮೂಲೆಗಳಲ್ಲಿ ಅಧಿಕಾರಕ್ಕೆ ಬಂದಿದೆ. ಬಿಜೆಪಿ ರಾಷ್ಟ್ರವ್ಯಾಪಿ ಬಲವರ್ಧನೆಗೊಳ್ಳಲು ಪ್ರಧಾನಿ ನರೇಂದ್ರ ಮೋದಿ ಮತ್ತು ಅಮಿತ್ ಷಾ ಅವರ ಕೊಡುಗೆ ಅಪಾರವಿದೆ.

2014 ರಲ್ಲಿ ಭಾರತದ ಪ್ರಧಾನ ಮಂತ್ರಿಗಳಾಗಿ ಅಧಿಕಾರ ಸ್ವೀಕರಿಸಿರುವ ನರೇಂದ್ರ ಮೋದಿಯವರು ಮೂರನೇ ಅವಧಿಗೆ ದೇಶವನ್ನು ಮುನ್ನಡೆಸುವ ಅವಕಾಶ ಪ್ರಾಪ್ತಿಯಾಯಿತು. ದೇಶದ ಕೋಟ್ಯಾಂತರ ಕಾರ್ಯಕರ್ತರ ತ್ಯಾಗ, ಶ್ರಮದ ಫಲವಾಗಿ ಅಧಿಕಾರಕ್ಕೆ ಬಂದಿರುವ ನಮ್ಮ ಪಕ್ಷವು 'ಸಬ್ ಕಾ ಸಾಥ್, ಸಬ್ ಕಾ ವಿಕಾಸ' ಎಂಬ ಧ್ಯೇಯದೊಂದಿಗೆ ಎಲ್ಲ ವರ್ಗಗಳ ಹಿತಕ್ಕಾಗಿ ಕೆಲಸ ಮಾಡುತ್ತಿದೆ. ಪ್ರಧಾನಿಯವರ ದೂರದೃಷ್ಟಿಯಿಂದ ನಮ್ಮ ಭಾರತವನ್ನು ಜಾಗತಿಕ ಮಟ್ಟದಲ್ಲಿ ಕೊಂಡ್ಯೊಯ್ಯುವ ಕೆಲಸವನ್ನು ಪ್ರಧಾನಿಗಳು ಅತ್ಯಂತ ಪ್ರಾಮಾಣಿಕತೆಯಿಂದ ಮಾಡುತ್ತಿದ್ದಾರೆ. ದೇಶದ ಮೂಲೆ–ಮೂಲೆಗಳಲ್ಲೂ ಕಮಲದ ಬಾವುಟ ಹಾರಾಡುತ್ತಿದೆ. ಮೋದಿ ಯವರ ಸೇವೆಯು ನಮ್ಮ ದೇಶಕ್ಕೆ ಇನ್ನೂ ಬೇಕಾಗಿದೆ ಎಂದು ಅವರು ತಿಳಿಸಿದರು.

ಕೇಂದ್ರ ಸರ್ಕಾರದ ಅವಧಿಯಲ್ಲಿ ನಡೆದಿರುವ ಅನೇಕ ಯೋಜನೆಗಳನ್ನು ಜನ ಸಾಮಾನ್ಯರಿಗೆ ತಿಳಿಸುವ ಕೆಲಸ ಕಾರ್ಯಕರ್ತರದ್ದಾಗಿದೆ. ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕಿದ್ದ ಸಂದರ್ಭದಲ್ಲಿ ಜಾರಿಗೊಂಡ ಹಲವು ಮಹತ್ತರ ಜನೋಪಯೋಗಿ ಕಾರ್ಯಕ್ರಮಗಳ ಬಗ್ಗೆ ಜನರಿಗೆ ತಿಳಿ ಹೇಳುವ ಕೆಲಸವಾಗಬೇಕಿದೆ. ಮುಂಬರುವ ಗ್ರಾ.ಪಂ, ತಾ.ಪಂ, ಜಿ.ಪಂ. ಚುನಾವಣೆಗಳಲ್ಲಿ ಬಿಜೆಪಿ (ಬೆಂಬಲಿತ)

ಅಭ್ಯರ್ಥಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಆರಿಸಿ ಕಳಿಸಲು ಕಾರ್ಯಕರ್ತರು ಶ್ರಮಿಸಬೇಕು ಎಂದು ಕೋರಿದರು. ಬಿಜೆಪಿ ಜತೆ ಜೆಡಿಎಸ್ ಪಕ್ಷವು ಮೈತ್ರಿಗೊಂಡಿದ್ದರಿಂದ ನಮ್ಮ ಪಕ್ಷಕ್ಕೆ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಅನುಕೂಲವಾಗಲಿದೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿಯವರು ತಿಳಿಸಿದರು.

ಅಧ್ಯಕ್ಷತೆಯನ್ನು ಅರಭಾವಿ ಮಂಡಲ ಬಿಜೆಪಿ ಅಧ್ಯಕ್ಷ ಮಹಾದೇವ ಶೆಕ್ಕಿ ವಹಿಸಿದ್ದರು.

ಬೆಳಗಾವಿ ವಿಭಾಗೀಯ ಪ್ರಭಾರಿ, ಮಾಜಿ ಶಾಸಕ ಸಂಜಯ ಪಾಟೀಲ, ಜಿಲ್ಲಾ ಗ್ರಾಮೀಣ ಅಧ್ಯಕ್ಷ ಸುಭಾಸ ಬಿ' ಪಾಟೀಲ, ರಾಷ್ಟ್ರೀಯ ಓಬಿಸಿ ಮೋರ್ಚಾ ಕಾರ್ಯಕಾರಿಣಿ ಸದಸ್ಯ ಲಕ್ಷ್ಮಣ ತಪಸಿ, ಅರಭಾವಿ ಬಿಎಲ್ಎ– 1 ಪ್ರಭಾರಿ ಗೋವಿಂದ ಕೊಪ್ಪದ, ನಿತೀನ ಚೌಗುಲೆ, ವೀರಭದ್ರಯ್ಯ ಪೂಜೇರಿ, ಪರಸಪ್ಪ ಬಬಲಿ, ಪ್ರಮೋದ. ನುಗ್ಗಾನಟ್ಟಿ ಅವರು ವೇದಿಕೆಯಲ್ಲಿದ್ದರು.

## ಶಿಕ್ಷಕಿ ನೀಲಾಂಬಿಕಾ ಪಟ್ಟಣಶೆಟ್ಟಿಯವರಿಗೆ ಅತ್ಯುತ್ತಮ ಸೇವಾ ರತ್ನ ಪ್ರಶಸ್ತಿ ಪ್ರದಾನ



**ಬೆಳವಾವಿ ವಾರ್ತೆ. ಘಟಪ್ರಭಾ:** ಇಲ್ಲಿಯ ಮಲ್ಲಾಪುರ ಪಿಜಿ ಪಟ್ಟಣದ ಸರ್ಕಾರಿ ಕನ್ನಡ ಶಾಲೆಯ ಶಿಕ್ಷಕಿ ಶ್ರೀಮತಿ ನೀಲಾಂಬಿಕಾ ಬಸವರಾಜ ಪಟ್ಟಣಶೆಟ್ಟಿಯವರಿಗೆ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಚಿಕ್ಕೋಡಿ ಹಾಗೂ ತಾಲೂಕು ಶಿಕ್ಷಕರ ಸಂಘ ಅಥಣಿ ಹಾಗೂ ಮಹಿಳಾ ವೇದಿಕೆ ವತಿಯಿಂದ ಹಮ್ಮಿಕೊಂಡಿದ್ದ ರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಶೈಕ್ಷಣಿಕ ಸೇವೆಯನ್ನು ಗುರುತಿಸಿ ಅತ್ಯುತ್ತಮ ಸೇವಾ ರತ್ನ ಪ್ರಶಸ್ತಿಯನ್ನು ಅಥಣಿಯಲ್ಲಿ ಪ್ರದಾನ ಮಾಡಲಾಯಿತು.

## ಎಮ್.ಇ.ಎಸ್ ಕಾಲೇಜಿನ ಎನ್.ಎಸ್.ಎಸ್ ಶಿಬಿರಕ್ಕೆ ಆರ್.ಸಿ.ಯು ಅಧಿಕಾರಿಗಳ ಭೇಟಿ

**ಬೆಳವಾವಿ ವಾರ್ತೆ**

**ಮೂಡಲಗಿ:** ತಾಲ್ಲೂಕಿನ ಪಟಗುಂದಿ ದತ್ತು ಗ್ರಾಮದಲ್ಲಿ ಜರುಗುತ್ತಿರುವ ಮೂಡಲಗಿ ಶಿಕ್ಷಣ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕದ 2025-26ನೇ ಸಾಲಿನ ವಾರ್ಷಿಕ ವಿಶೇಷ ಶಿಬಿರಕ್ಕೆ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಎನ್.ಎಸ್. ಎಸ್ ಕಾರ್ಯಕ್ರಮ ಸಂಯೋಜನಾ ಅಧಿಕಾರಿ ಡಾ. ಕನಕಪ್ಪ ಪೂಜಾರ್, ಬೆಳಗಾವಿ ಜಿಲ್ಲಾ ನೋಡೆಲ್ ಅಧಿಕಾರಿ ಡಾ. ಸಂಜು ತಳವಾರ್ ಹಾಗೂ ಚಿಕ್ಕೋಡಿ ಜಿಲ್ಲಾ ಪ್ರಭಾರಿ ಸಂಯೋಜನಾ ಅಧಿಕಾರಿ ಶಂಕರ್ ನಿಂಗನೂರು ಭೇಟಿ ನೀಡಿದರು.

ಈ ಸಂದರ್ಭದಲ್ಲಿ ಡಾ. ಕನಕಪ್ಪ ಪೂಜಾರ್ ಶಿಬಿರಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯಂತಹ ಶಿಬಿರಗಳಲ್ಲಿ ಸ್ವಯಂ ಸೇವಕರಾಗಿ ಭಾಗವಹಿಸುವ ಮೂಲಕ ನಾಯಕತ್ವ ಗುಣಗಳನ್ನು ಬೆಳೆಸಿಕೊಂಡು ತಮ್ಮ ಭವಿಷ್ಯವನ್ನು ತಾವೇ ಬೆಳೆಸಿಕೊಳ್ಳುವ ಅವಕಾಶ ಸಿಕ್ಕಂತೆ ಆಗುತ್ತದೆ ಎಂದರು

ಶಿಬಿರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಶಿಬಿರಾರ್ಥಿಗಳು ಭಾಗವಹಿಸಿರುವುದನ್ನು ಕಂಡು ಎನ್.ಎಸ್.ಎಸ್ ಸಂಯೋಜನಾ ಅಧಿಕಾರಿಗಳಾದ ಡಾ. ಪವನ್ ಕುಮಾರ್ ಕೆ. ಹಾಗೂ ಲೋಕೇಶ್ ಹಿಡಕಲ್ ಅವರನ್ನು ಅಭಿನಂದಿಸಿದರು.



ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಬಸಗೌಡ ಪಾಟಿಲ್, ಸುಭಾಷ್ ಪಾಟಿಲ್, ಬಸವರಾಜ್ ಪಾಟಿಲ್, ಹನುಮಂತ ನಾಯಕ್, ಪ್ರೊ ಪಿ.ಬಿ. ಚೌಡಕೆ, ಪ್ರೊ. ವೇದಾ ದೇಶಪಾಂಡೆ, ಪ್ರೊಸವಿತಾ ಕೊತ್ತಲ್, ಪ್ರೊ ಸಂತೊ ಷ ಮುಗಳಿಮುಂತಾದವರು ಇದ್ದರು.

# ತೆಂಗಿನ ತೋಟಗಳಲ್ಲಿ ಕೀಟ-ರೋಗ ಹೆಚ್ಚಳ: ರಾಜ್ಯದಲ್ಲಿ ಕುಸಿಯುತ್ತಿದೆ ಉತ್ಪಾದನೆ, ಸಂಕಷ್ಟದಲ್ಲಿ ರೈತರು..!

ಬೆಂಗಳೂರು: ತೆಂಗಿನ ತೋಟಗಳಲ್ಲಿ ಕೀಟ ಮತ್ತು ರೋಗ ಹಾವಳಿ ನಿಧಾನವಾಗಿ ಹೆಚ್ಚುತ್ತಿದ್ದು, ಇದು ಈಗ ರೈತರಿಗೆ ಮಾತ್ರವಲ್ಲದೆ ಗ್ರಾಮೀಣ ಆರ್ಥಿಕತೆಯಿಗೂ ದೊಡ್ಡ ಸವಾಲಾಗಿ ಪರಿಣಮಿಸಿದೆ.

ಒಂದು ಕಾಲದಲ್ಲಿ ಸೀಮಿತ ಮತ್ತು ಋತು ಆಧಾರಿತವಾಗಿದ್ದ ಈ ಸಮಸ್ಯೆ, ಈಗ ದೀರ್ಘಕಾಲಿಕ ಪರಿಣಾಮಗಳನ್ನು ಉಂಟುಮಾಡುತ್ತಿದೆ. ವಿಶೇಷವಾಗಿ ಕರ್ನಾಟಕದಲ್ಲಿ ಇದು ಗಂಭೀರ ಚಿಂತೆಗೆ ಕಾರಣವಾಗಿದೆ.



ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ಮತ್ತು ತೆಂಗಿನಕಾಯಿ ಅಭಿವೃದ್ಧಿ ಮಂಡಳಿ (ಅಆಃ)ಯ ತಜ್ಞರು ಮತ್ತು ಅಧಿಕಾರಿಗಳು, ಕೀಟ ದಾಳಿ ಸಾಮಾನ್ಯವಾಗಿ ಋತು ಆಧಾರಿತವಾದರೂ, ಅದರ ಪರಿಣಾಮ ಉತ್ಪಾದನೆ, ರೈತರ ಆದಾಯ ಮತ್ತು ಕೃಷಿ ಆರ್ಥಿಕತೆಯ ಮೇಲೆ ವ್ಯಾಪಕವಾಗಿ ಬೀರುತ್ತಿದೆ ಎಂದು ಹೇಳಿದ್ದಾರೆ.

ಇತ್ತೀಚೆಗೆ ಲೋಕಸಭೆಯಲ್ಲಿ ಕೂಡ ಈ ವಿಷಯ ಪ್ರಸ್ತಾಪಗೊಂಡಿದ್ದು, ತೆಂಗು ಬೆಳೆ ಉತ್ತೇಜನ ಯೋಜನೆಗಳು ಮತ್ತು ರೈತರ ಸಮಸ್ಯೆಗಳ ಬಗ್ಗೆ ಚರ್ಚೆ ನಡೆದಿದೆ.

2024ರಲ್ಲಿ ಕಾರ್ಯಪಡೆ ಮತ್ತು 2025ರಲ್ಲಿ ತಜ್ಞರ ತಂಡವನ್ನು ರಚಿಸಿ ಕರ್ನಾಟಕದಲ್ಲಿ ಪ್ರಮುಖ ಕೀಟ-ರೋಗಗಳ ಸ್ಥಿತಿ ಪರಿಶೀಲಿಸಲಾಗಿದೆ. ಅದರ ಪ್ರಕಾರ, ರಾಜ್ಯದ ಸುಮಾರು 12.2%ರಿಂದ 14.7%ರವರೆಗೆ ತೆಂಗಿನ ತೋಟಗಳು ಕೀಟ ಮತ್ತು ರೋಗಗಳಿಂದ ಬಾಧೆಗೊಳಗಾಗಿದೆ ಎಂದು ತಿಳಿದುಬಂದಿದೆ ಎಂದು ಸಚಿವಾಲಯ ಹೇಳಿದೆ.

ಕಳೆದ ಐದು ವರ್ಷಗಳಲ್ಲಿ ಕರ್ನಾಟಕದಲ್ಲಿ ಕೀಟ-ರೋಗ ನಿಯಂತ್ರಣ ಮತ್ತು ಉತ್ಪಾದನೆ ಹೆಚ್ಚಿಸಲು 174.55 ಕೋಟಿ ರೂ.ವೆಚ್ಚ ಮಾಡಲಾಗಿದ್ದು, ಕ್ಷೇತ್ರಾಧಾರಿತ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ತಿಳಿಸಿದೆ.

ಭಾರತದಲ್ಲಿ ತೆಂಗಿನ ಉತ್ಪಾದನೆ ಮುಖ್ಯವಾಗಿ ಕರ್ನಾಟಕ, ತಮಿಳುನಾಡು, ಕೇರಳ ಮತ್ತು ಆಂಧ್ರ ಪ್ರದೇಶಗಳಲ್ಲಿ ಕೇಂದ್ರೀಕೃತವಾಗಿದೆ. ಭಾರತವು ವಿಶ್ವದಲ್ಲೇ ಅತಿ ದೊಡ್ಡ ತೆಂಗಿನ ಉತ್ಪಾದಕ ರಾಷ್ಟ್ರವಾಗಿದ್ದು, ಜಾಗತಿಕ ಉತ್ಪಾದನೆಯ ಸುಮಾರು 30.37% ಪಾಲು ಹೊಂದಿದೆ. ದೇಶದಲ್ಲಿ ಸುಮಾರು 30 ಮಿಲಿಯನ್ ಜನರು ತೆಂಗಿನ ಕೃಷಿಯ ಮೇಲೆ ಅವಲಂಬಿತರಾಗಿದ್ದಾರೆ.

ಕರ್ನಾಟಕ ರಾಜ್ಯ ದೇಶದ ಒಟ್ಟು ಉತ್ಪಾದನೆಯಲ್ಲಿ ಸುಮಾರು 28.5% ಪಾಲು ಹೊಂದಿದೆ. 2023-24ರಲ್ಲಿ ರಾಜ್ಯದಲ್ಲಿ 5.64 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಬೆಳೆದಿದ್ದು, ಸುಮಾರು 6,151 ಮಿಲಿಯನ್ ತೆಂಗುಗಳು ಉತ್ಪಾದನೆಯಾಗಿವೆ. ರಾಜ್ಯದಲ್ಲಿ ಸುಮಾರು 7 ಲಕ್ಷಕ್ಕೂ ಹೆಚ್ಚು ರೈತರು ತೆಂಗಿನ ಕೃಷಿಯಲ್ಲಿ ತೊಡಗಿಸಿಕೊಂಡಿದ್ದಾರೆ.

ತಿಪಟೂರು ಪ್ರದೇಶ ತೆಂಗಿನ ಉತ್ಪಾದನೆಗಾಗಿ ಪ್ರಸಿದ್ಧವಾಗಿದ್ದು, 'ಟಿಪಟೂರು ಟಾಲ್' ತಳಿ ವಿಶೇಷ ಖ್ಯಾತಿ ಪಡೆದಿದೆ. ಇದಕ್ಕೆ ಜಿಐ ಟ್ಯಾಗ್ ಪಡೆಯಲು ಪ್ರಯತ್ನ ಕೂಡ ನಡೆಯುತ್ತಿದೆ. ಈ ಪ್ರದೇಶದ ಆರ್ಥಿಕತೆಯಲ್ಲೂ ತೆಂಗಿನ ಬೆಳೆ ಪ್ರಮುಖ ಪಾತ್ರ ವಹಿಸುತ್ತಿದೆ, ಇಲ್ಲಿನ ಕೊಬ್ಬರಿಗೆ ಹೆಚ್ಚಿನ ಬೇಡಿಕೆಯಿದೆ. ಇಲ್ಲಿನ ಎಪಿಎಂಸಿ ಮಾರುಕಟ್ಟೆಯು ಡಿಜಿಟಲ್‌ಗೆ ಹೋದ ಮೊದಲ ಮಾರುಕಟ್ಟೆಗಳಲ್ಲಿ ಒಂದಾಗಿದೆ. ಅನೇಕ ರಾಜಕಾರಣಿಗಳು ತೆಂಗಿನಕಾಯಿ ಉತ್ಪಾದನೆಯ ಆಧಾರದ ಮೇಲೆ ಈ ಪ್ರದೇಶದಿಂದ ಮತಗಳನ್ನು ಬಯಸುತ್ತಾರೆಂದು ತಜ್ಞರು ಹೇಳಿದ್ದಾರೆ.

ದಕ್ಷಿಣ ಭಾರತದಲ್ಲಿ ಸಾಮಾನ್ಯವಾಗಿ ರುಗೋಸ್ ವೈಟ್‌ಫ್ಲೈ, ರೆಡ್ ಪಾಮ್ ವೀವಿಲ್, ಸ್ಟೆಮ್ ಬ್ಲೀಡಿಂಗ್, ಲೀಫ್ ಬ್ಲೈಟ್ ಮುಂತಾದ ಕೀಟ-ರೋಗಗಳು ಕಂಡುಬರುತ್ತವೆ. ಆದರೆ, ಕರ್ನಾಟಕದಲ್ಲಿ ವಿಶೇಷವಾಗಿ ಬ್ಲಾಕ್ ಹೆಡೆಡ್ ಕ್ಯಾಟರ್ಪಿಲ್ಲರ್ (ಃಊಅ) ದೊಡ್ಡ ಸಮಸ್ಯೆಯಾಗಿದ್ದು, ಇದು ಬೇಸಿಗೆಯಲ್ಲಿ ಹೆಚ್ಚಾಗಿ ಕಾಣಿಸಿಕೊಂಡು ಮಳೆಗಾಲದಲ್ಲಿ ಕಡಿಮೆಯಾಗುತ್ತದೆ.

ಹವಾಮಾನ ಬದಲಾವಣೆ, ಅಕಾಲಿಕ ಮಳೆ, ಮಣ್ಣಿನ ಪೋಷಕಾಂಶಗಳ ಕೊರತೆ ಇವುಗಳ ಪರಿಣಾಮವಾಗಿ ಹೂವು ಬಿಡುವಿಕೆ ಮತ್ತು ಫಲಧಾರಣೆ ಕುಸಿಯುತ್ತಿದೆ. ಇದರಿಂದ ಉತ್ಪಾದನೆ ಮಾತ್ರವಲ್ಲದೆ ತೆಂಗಿನ ನೀರಿನ ರುಚಿ ಮತ್ತು ಗುಣಮಟ್ಟದಲ್ಲೂ ಕುಸಿತ ಕಾಣುತ್ತಿದೆ.

ತೆಂಗು ದೀರ್ಘಾವಧಿಯ ಬೆಳೆಯಾಗಿರುವುದರಿಂದ ಒಂದು ಬಾರಿ ಹಾನಿಯಾದರೆ ಅದರ ಪರಿಣಾಮ ಹಲವು ವರ್ಷಗಳವರೆಗೆ ಮುಂದುವರಿಯುತ್ತದೆ. ಸಾಮಾನ್ಯವಾಗಿ ಈ ಬೆಳೆ ಫಲ ನೀಡಲು 3ರಿಂದ 6 ವರ್ಷಗಳ ಸಮಯ ತೆಗೆದುಕೊಳ್ಳುತ್ತದೆ. ಆದರೆ, ತಮಿಳುನಾಡು ಮತ್ತು ಕೇರಳದಲ್ಲಿ ಹೆಚ್ಚು ಪ್ರಚಲಿತವಾಗಿರುವ ಕುಬ್ಜ ಪ್ರಭೇದಗಳು ಸುಮಾರು ಮೂರು ವರ್ಷಗಳನ್ನು ತೆಗೆದುಕೊಳ್ಳುತ್ತವೆ.

ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಮತ್ತು ಸಂಸ್ಥೆಗಳು ಹಲವು ಕ್ರಮಗಳನ್ನು ಕೈಗೊಂಡಿವೆ. ಕೀಟ ನಿರ್ವಹಣಾ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸಲು ಕಳೆದ ಐದು ವರ್ಷಗಳಲ್ಲಿ 1.06 ಕೋಟಿ ರೂ. ಯೋಜನೆಗಳನ್ನು ರೂಪಿಸಿದೆ. ಪ್ರಸಕ್ತ ವರ್ಷದಲ್ಲಿ, 3,757 ಹೆಕ್ಟೇರ್‌ನಲ್ಲಿ ತೆಂಗಿನಕಾಯಿ ಆಧಾರಿತ ಬೆಳೆ ವ್ಯವಸ್ಥೆಗಳ ಮೂಲಕ ಉತ್ಪಾದಕತೆ ಸುಧಾರಣೆಗೆ 10.89 ಕೋಟಿ ರೂ.ಗಳನ್ನು ಮತ್ತು ಕೀಟ ಮತ್ತು ರೋಗ ನಿಯಂತ್ರಣದ ಮೇಲೆ ಕೇಂದ್ರೀಕರಿಸಿ 1,000 ಹೆಕ್ಟೇರ್‌ಗಿಂತ ಹೆಚ್ಚು ಮರು ನಾಟಿ ಮತ್ತು ಪುನರುಜ್ಜೀವನಕ್ಕಾಗಿ 4.52 ಕೋಟಿ ರೂ.ಗಳನ್ನು ಹಂಚಿಕೆ ಮಾಡಲಾಗಿದೆ. ಇದರ ಜೊತೆಗೆ, ನೀರಿನ ನಿರ್ವಹಣೆ, ಪೋಷಕಾಂಶ ಪೂರೈಕೆ ಹಾಗೂ ಕೀಟನಾಶಕಗಳ ಸಮರ್ಪಕ ಬಳಕೆಯ ಮೂಲಕ ಪ್ರಾದೇಶಿಕ ಮಟ್ಟದಲ್ಲಿ ವಿಶೇಷ ಪರಿಹಾರಗಳನ್ನು ಜಾರಿಗೆ ತರಲು ಯೋಜನೆ ರೂಪಿಸಿದೆ.

ಕರ್ನಾಟಕ ಸರ್ಕಾರವೂ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ್ದು, 2025-26 ಮತ್ತು 2026-27 ಬಜೆಟ್‌ಗಳಲ್ಲಿ ಕೀಟ ನಿಯಂತ್ರಣಕ್ಕೆ ವಿಶೇಷ ಯೋಜನೆಗಳನ್ನು ಘೋಷಿಸಿದೆ.

ಕೃಷಿ ವಿಶ್ವವಿದ್ಯಾಲಯಗಳು ಮತ್ತು ಕೃಷಿ ವಿಜ್ಞಾನ ಕೇಂದ್ರಗಳ ಸಹಯೋಗದಲ್ಲಿ ಸಮುದಾಯ ಆಧಾರಿತ ನಿಯಂತ್ರಣ ಕ್ರಮಗಳನ್ನು ಜಾರಿಗೆ ತರುವುದಾಗಿಯೂ ಘೋಷಿಸಿದೆ.

# ದಾವಣಗೆರೆ ದಕ್ಷಿಣದಿಂದ ಸಮರ್ಥ್ ಸ್ಪರ್ಧೆ: ವಂಶಪಾರಂಪರ್ಯ ರಾಜಕಾರಣಕ್ಕೆ ಮಣೆ ಹಾಕುತ್ತಾರಾ ಮತದಾರರು?



ಬೆಂಗಳೂರು: ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಮತ್ತು ಮಾಜಿ ಮುಖ್ಯಮಂತ್ರಿ ಎಸ್.ಆರ್. ಬೊಮ್ಮಾಯಿ ಅವರ ಮೊಮ್ಮಕ್ಕಳು ಚುನಾವಣೆಯಲ್ಲಿ ಸೋಲು ಕಂಡ ನಂತರ, ಇದೀಗ ಮತ್ತೊಬ್ಬ ರಾಜಕೀಯ ವಂಶಸ್ಥರ ಮೇಲೆ ರಾಜ್ಯ ರಾಜಕೀಯದ ಗಮನ ಸೆಳೆದಿದೆ. ಕಾಂಗ್ರೆಸ್‌ನ ಹಿರಿಯ ನಾಯಕ ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ ಸಮರ್ಥ ಶಾಮನೂರು, ರಾಜ್ಯ ವಿಧಾನಸಭೆಯ ಉಪಚುನಾವಣೆಯಲ್ಲಿ ದಾವಣಗೆರೆ ದಕ್ಷಿಣ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದಾರೆ.

ಸಮರ್ಥ್ ಈ ಉಪಚುನಾವಣೆಯಲ್ಲಿ ಸೋತರೆ, ಮಾಜಿ ಮುಖ್ಯಮಂತ್ರಿ ಮತ್ತು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಪುತ್ರ ನಿಖಿಲ್ ಕುಮಾರಸ್ವಾಮಿ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಪುತ್ರ ಭರತ್ ಬೊಮ್ಮಾಯಿ ಅವರ ಪಟ್ಟಿಗೆ ಸೇರ್ಪಡೆಯಾಗಲಿದ್ದಾರೆ.

ಆದರೆ ಮೊದಲ ಪ್ರಯತ್ನದಲ್ಲೇ ಗೆಲುವು ಸಾಧಿಸಿದರೆ, ಜೆಡಿಎಸ್‌ನ ಜಿಟಿ ದೇವೇಗೌಡ (ಚಾಮುಂಡೇಶ್ವರಿ ಕ್ಷೇತ್ರ) ಮತ್ತು ಅವರ ಪುತ್ರ ಜಿಡಿ ಹರೀಶ್ ಗೌಡ (ಹುಣಸೂರು), ಅರಕಲಗೂಡು ಕ್ಷೇತ್ರದ ಎ. ಮಂಜು (ವಾಲೆ ಮಂಜು) ಮತ್ತು ಅವರ ಪುತ್ರ ಮಂತರ್ ಗೌಡ (ಮಡಿಕೇರಿ ಕ್ಷೇತ್ರ) ಇವರಂತ ಯಶಸ್ವಿ ತಂದೆ-ಮಗ ಜೋಡಿಗಳ ಸಾಲಿನಲ್ಲಿ ಸೇರಲಿದ್ದಾರೆ. ಬಲವಾದ ರಾಜಕೀಯ ಹಿನ್ನೆಲೆ ಇದ್ದರೂ ನಿಖಿಲ್ ಮತ್ತು ಭರತ್ ಅವರಿಗೆ ಅದು ಸಹಾಯವಾಗಲಿಲ್ಲ. ಕಾಂಗ್ರೆಸ್ ಪಕ್ಷವು 'ಐದು ಗ್ಯಾರಂಟಿ' ಯೋಜನೆಯನ್ನು ಜಾರಿಗೆ ತಂದು, ಈ ಕ್ಷೇತ್ರಗಳನ್ನು ಗೆಲ್ಲುವತ್ತ ಗಮನ ಹರಿಸಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಸಚಿವ ಸಂಪುಟ ಸದಸ್ಯರು ಒಗ್ಗೂಡಿ ಕೆಲಸ ಮಾಡಿದ್ದರು.

ನಿಖಿಲ್ ಕುಮಾರಸ್ವಾಮಿ ಮತ್ತು ಭರತ್ ಬೊಮ್ಮಾಯಿ ಪರಿಸ್ಥಿತಿಗೆ ವಿರುದ್ಧವಾಗಿ ಹೋರಾಡಿದರೆ, ಸಮರ್ಥ್ ಶಾಮನೂರು ಅವರಿಗೆ ಆಡಳಿತ ಪಕ್ಷದ ಬೆಂಬಲ ಇದೆ. ಅವರು ತೋಟಗಾರಿಕಾ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಅವರ ಪುತ್ರರಾಗಿದ್ದು, ವೀರಶೈವ ಲಿಂಗಾಯತ ಸಮುದಾಯದ ಪ್ರಭಾವಿ ನಾಯಕ ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ ಎಂಬ ಗುರುತು ಕೂಡ ಹೊಂದಿದ್ದಾರೆ. ವಿವಿಧ ಪಕ್ಷಗಳ ನಾಯಕರಿಂದಲೂ ಪರೋಕ್ಷ ಬೆಂಬಲ ದೊರೆಯುವ ಸಾಧ್ಯತೆ ಇದೆ ಎಂದು ಮೂಲಗಳು ಹೇಳುತ್ತವೆ.

ಶಾಮನೂರು ಕುಟುಂಬದ ಅಕ್ಕಿ ಮಿಲ್ಲುಗಳು ಮತ್ತು ಶಿಕ್ಷಣ ಸಂಸ್ಥೆಗಳ ಸಿಬ್ಬಂದಿ ಮತ್ತು ಕಾರ್ಮಿಕರು ಮಹತ್ವದ ಮತದಾರರ ಸಮೂಹವಾಗಿದ್ದಾರೆ. ಆದರೆ 70,000ಕ್ಕೂ ಹೆಚ್ಚು ಮತಗಳನ್ನು ಹೊಂದಿರುವ ಮುಸ್ಲಿಂ ಸಮುದಾಯದ ಅಸಮಾಧಾನವನ್ನು ಸಮರ್ಥ್ ಎದುರಿಸಬಹುದೇ ಎಂಬುದು ನೋಡಬೇಕಿದೆ. ತಮ್ಮ ಸಮುದಾಯದ ಅಭ್ಯರ್ಥಿಯನ್ನು ನಿಲ್ಲಿಸದ ಕಾಂಗ್ರೆಸ್ ವಿರುದ್ಧ ಮತ ಚಲಾಯಿಸುವಂತೆ ಧಾರ್ಮಿಕ ನಾಯಕರು ಸೂಚನೆ ನೀಡಿರುವುದಾಗಿ ತಿಳಿದುಬಂದಿದೆ.

# ಸಾಮಾನ್ಯರ ಬ್ಯಾಂಕ್ ಖಾತೆಗಳೇ ಅಪರಾಧಿಗಳ ಆಯುಧ: ಬೆಳಗಾವಿ ಪೊಲೀಸರ ಭರ್ಜರಿ ಬೇಟೆ



**ಬೆಳಗಾವಿ ವಾರ್ತೆ**

**ಬೆಳಗಾವಿ:** 'ವರ್ಕ್ ಫ್ರಾಂ ಹೋಮ್' ಕೆಲಸ ಕೊಡಿಸುತ್ತೇವೆ, ಸರ್ಕಾರದ ಸಾಲ ಮಾಡಿಸಿಕೊಡುತ್ತೇವೆ ಎಂದು ನಂಬಿಸಿ ಅಮಾಯಕ ಜನರ ಹೆಸರಲ್ಲಿ ಬ್ಯಾಂಕ್ ಖಾತೆಗಳನ್ನು ತೆರೆಸಿ, ಆ ಖಾತೆಗಳನ್ನೇ ಸೈಬರ್ ವಂಚನೆಗೆ ಬಳಸಿದ ಭಾರೀ ಜಾಲವನ್ನು ಬೆಳಗಾವಿ ನಗರ ಸೈಬರ್ ಅಪರಾಧ ಪೊಲೀಸರು ಭೇದಿಸಿದ್ದಾರೆ.

ಈ ಪ್ರಕರಣದಲ್ಲಿ ಇಬ್ಬರು ಪ್ರಮುಖ ಆರೋಪಿತರನ್ನು ಬಂಧಿಸಲಾಗಿದ್ದು, ಸುಮಾರು 72 ಬ್ಯಾಂಕ್ ಖಾತೆಗಳ ಮೂಲಕ ಸಂಘಟಿತ ಸೈಬರ್ ವಂಚನೆ ನಡೆದಿದೆ ಎಂಬ ಅಚ್ಚರಿಯ ಸಂಗತಿ ತನಿಖೆಯಿಂದ ಬೆಳಕಿಗೆ ಬಂದಿದೆ.

ನಗರದ ಸೈಬರ್ ಅಪರಾಧ ಪೊಲೀಸ್ ಠಾಣೆಯಲ್ಲಿ 22 ಫೆಬ್ರವರಿ 2026ರಂದು ದಾಖಲಾಗಿದ್ದ ಪ್ರಕರಣದ ತನಿಖೆ ವೇಳೆ ಈ ಜಾಲ ಬೆಳಕಿಗೆ ಬಂದಿತು. ಪಿರ್ಯಾದಿದಾರ ಕುಮಾರಿ ಮಾನಸಿ ಚವ್ಹಾಣ ಅವರಿಗೆ ಪರಿಚಿತಳಾದ ಮೇಘಾ ಮಾರಡೊಳಕರ, ಪಿರ್ಯಾದಿ ಹಾಗೂ ಹರಿಶ್ಚಂದ್ರ ಅವಿನಾಶ ದಿವಟೆ ಅವರಿಗೆ ಮನೆಯಿಂದಲೇ ಕೆಲಸ ಮತ್ತು ಸಾಲ ಸೌಲಭ್ಯ ಕೊಡಿಸುವುದಾಗಿ ನಂಬಿಕೆ ಮೂಡಿಸಿದ್ದಳು. ಆದರೆ, ಕೆಲಸವೂ ಕೊಡಿಸದೆ, ಸಾಲವೂ ಮಾಡಿಸದೆ, ಅವರ ಹೆಸರಿನಲ್ಲಿ ತೆರೆದ ಬ್ಯಾಂಕ್ ಖಾತೆಗಳನ್ನು ಮೋಸದ ಹಣ ವರ್ಗಾವಣೆಗೆ ಬಳಸಿಕೊಂಡಿರುವುದು ಬಹಿರಂಗವಾಯಿತು.

ಪ್ರಕರಣದ ತನಿಖೆ ಕೈಗೊಂಡ ಪೊಲೀಸರು 24 ಫೆಬ್ರವರಿ 2026ರಂದು ನ್ಯಾಯಾಲಯದ ಶೋಧ ವಾರೆಂಟ್ ಪಡೆದು ಆರೋಪಿ ಮೇಘಾ ಮಾರಡೊಳಕರ ನಿವಾಸವನ್ನು ತಪಾಸಣೆ ನಡೆಸಿದರು. ವಿಚಾರಣೆ ವೇಳೆ ಆಕೆ ಬೆಳಗಾವಿಯ ಹಲವು ಅಮಾಯಕ ಜನರನ್ನು ಬಳಸಿ ವಿವಿಧ ಬ್ಯಾಂಕ್‌ಗಳಲ್ಲಿ 72 ಖಾತೆಗಳನ್ನು ತೆರೆಸಿದ್ದಳು ಎಂಬ ಸಂಗತಿ ಪತ್ತೆಯಾಯಿತು.

ಆ ಖಾತೆಗಳ ಸಂಬಂಧ ದಾಖಲೆಗಳನ್ನು ಟ್ರಾವೆಲ್ಸ್ ಪಾರ್ಸಲ್ ಮೂಲಕ ಮುಂಬೈ ಮೂಲದ ಹೈದರಅಲಿ ಗುಲಾಮಅಲಿ ಉಜ್ಜೈನವಾಲಾ ಅವರಿಗೆ ಕಳುಹಿಸಲಾಗುತ್ತಿತ್ತು ಎನ್ನಲಾಗಿದೆ. ಇದಕ್ಕಿಂತಲೂ ಆತಂಕಕಾರಿ ಅಂಶವೆಂದರೆ, ಈ ಬ್ಯಾಂಕ್ ಖಾತೆಗಳ ಜಾಲವನ್ನು ಸೈಬರ್ ಸಂಘಟಿತ ಅಪರಾಧಕ್ಕಾಗಿ ಬಳಸಲಾಗುತ್ತಿದ್ದು, ಪ್ರಮುಖ ಆರೋಪಿತನಾದ ಹೈದರಅಲಿ ತನ್ನ ಮಗ ಇದ್ರಿಸ್ ಅಲಿ ಹೈದರಅಲಿ, ಮತ್ತೊಬ್ಬ ಆರೋಪಿ ಅಜಿಜ್ ಬೋರಾ ಹಾಗೂ ಮೇಘಾ ಮಾರಡೊಳಕರ ಮಗಳು ಶಿವಾನಿ ನಾರಾಯಣ ಮಾರಡೊಳಕರ ಮೂಲಕ ದೇಶದಾಚೆಗೂ ಸಂಪರ್ಕ ಜಾಲ ಬೆಳೆಸಿದ್ದಾನೆ ಎಂಬ ಶಂಕೆ ಪೊಲೀಸರ ತನಿಖೆಯಲ್ಲಿ ವ್ಯಕ್ತವಾಗಿದೆ. ಈ ಬೆನ್ನಲ್ಲೇ, ಪೊಲೀಸರು 22 ಮಾರ್ಚ್ 2026ರಂದು ಮುಂಬೈನಲ್ಲಿ ಹೈದರಅಲಿಯನ್ನು ವಶಕ್ಕೆ ಪಡೆದು, ನ್ಯಾಯಾಲಯಕ್ಕೆ ಹಾಜರುಪಡಿಸಿ ಪೊಲೀಸ್ ಕಸ್ಟಡಿಯಲ್ಲಿ ವಿಚಾರಣೆ ನಡೆಸಿದರು. ಇದೇ ಪ್ರಕರಣದಲ್ಲಿ ಆರೋಪಿ ಆಗಿರುವ ಮೇಘಾ ಮಾರಡೊಳಕರರನ್ನು 26 ಮಾರ್ಚ್ 2026ರಂದು ಗೋವಾದ ಪೂರ್ವ ಭಾಗದಲ್ಲಿ ವಶಕ್ಕೆ ಪಡೆದು, 27 ಮಾರ್ಚ್‌ರಂದು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಇಬ್ಬರೂ ಆರೋಪಿಗಳು ಈಗ ನ್ಯಾಯಾಂಗ ಬಂಧನದಲ್ಲಿದ್ದಾರೆ.

ತನಿಖೆಯ ಮತ್ತೊಂದು ದೊಡ್ಡ ಬಹಿರಂಗವೆಂದರೆ, 72 ಖಾತೆಗಳ ಪೈಕಿ 47 ಖಾತೆಗಳ ವಿರುದ್ಧವೇ 1930 ಹಾಗೂ ಎನ್‌ಸಿಸಿಆರ್‌ಪಿ ಪೋರ್ಟಲ್‌ನಲ್ಲಿ ಒಟ್ಟು 144 ಪ್ರಕರಣಗಳು ದಾಖಲಾಗಿವೆ. ಇದೇ 47 ಖಾತೆಗಳಲ್ಲಿ ಸೇರಿ ?1,27,04,678 ಮೊತ್ತದ ಮೋಸದ ಹಣ ಜಮಾ ಆಗಿರುವುದು ಪತ್ತೆಯಾಗಿದೆ. ಇದರಿಂದ ಬೆಳಗಾವಿಯಿಂದ ನಡೆದ ಬ್ಯಾಂಕ್ ಖಾತೆ ತೆರೆಸುವ ನೆಪದ ಜಾಲ, ದೇಶವ್ಯಾಪಿ ಸೈಬರ್ ವಂಚನೆಗೆ ಸೇತುವೆಯಾಗಿತ್ತು ಎಂಬ ಅನುಮಾನ ಗಾಢವಾಗಿದೆ.

ಒಟ್ಟಿನಲ್ಲಿ, ಉದ್ಯೋಗ ಮತ್ತು ಸಾಲದ ಆಮಿಷ ತೋರಿಸಿ ಖಾತೆ ತೆರೆಸುವ ಈ ಮಾದರಿ ಕೇವಲ ಸಾಮಾನ್ಯ ಮೋಸವಲ್ಲ; ಅದು ಸಾಮಾನ್ಯ ನಾಗರಿಕರ ಬ್ಯಾಂಕ್ ಪರಿಚಯವನ್ನೇ ಅಪರಾಧ ಜಾಲದ ಆಯುಧವಾಗಿಸುವ ಅಪಾಯಕಾರಿ ಕುತಂತ್ರ ಎಂಬುದು ಸ್ಪಷ್ಟವಾಗಿದೆ.

ಈ ಕಾರ್ಯಾಚರಣೆ ಪೊಲೀಸ್ ಆಯುಕ್ತರು ಹಾಗೂ ಉಪ ಪೊಲೀಸ್ ಆಯುಕ್ತರು (ಕಾನೂನು ಮತ್ತು ಸುವ್ಯವಸ್ಥೆ), ಬೆಳಗಾವಿ ನಗರ ಅವರ ಮಾರ್ಗದರ್ಶನದಲ್ಲಿ ನಡೆದಿದ್ದು, ಸಹಾಯಕ ಪೊಲೀಸ್ ಆಯುಕ್ತ ಬಿ.ಎಸ್. ಮಂಟೂರ, ಪೊಲೀಸ್ ನಿರೀಕ್ಷಕ ಎಸ್.ಎನ್. ಗಾಚಿ ಹಾಗೂ ಸೈಬರ್ ಅಪರಾಧ ಪೊಲೀಸ್ ಠಾಣೆಯ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು. ಯಶಸ್ವಿ ಕಾರ್ಯಾಚರಣೆಗೆ ಪೊಲೀಸ್ ಆಯುಕ್ತರು ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಶ್ಲಾಘಿಸಿದ್ದಾರೆ.

## ಖಸಾಯಿ ಖಾನೆ ಮತ್ತು ಮಾಂಸ ಮಾರಾಟ ನಿಷೇಧ

ಗದಗ: ಗದಗ ಬೆಟಗೇರಿ ನಗರಸಭೆ ವ್ಯಾಪ್ತಿಯ ಖಸಾಯಿಖಾನೆಗಳಲ್ಲಿ ಪ್ರಾಣಿವಧೆ ಮಾಡುವ ಹಾಗೂ ಮಾಂಸ ಮಾರಾಟಗಾರರಿಗೆ ತಿಳಿಯಪಡಿಸುವುದೇನೆಂದರೆ ಮಹಾವೀರ ಜಯಂತಿ ಅಂಗವಾಗಿ ಮಾರ್ಚ 31 ರಂದು ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ.

ಮಾಂಸ ಮಾರಾಟ ಮಾಡುವದಾಗಲಿ ಹಾಗೂ ಜಾನುವಾರುಗಳನ್ನು ವಧೆ ಮಾಡದಿರಲು ಸೂಚಿಸಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ಲೈಸನ್ಸನ್ನು ರದ್ದು ಮಾಡಲಾಗುವುದು ಎಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಸ್ತೆ ಕಾಮಗಾರಿಗೆ ಗುದ್ದಲಿ ಪೂಜೆ

**ಬೆಳಗಾವಿ ವಾರ್ತೆ**

ಚನ್ನಮ್ಮನ ಕಿತ್ತೂರು: 35 ಲಕ್ಷ ರೂ. ವೆಚ್ಚದಲ್ಲಿ ತಾಲೂಕಿನ ಡೊಂಬರಕೊಪ್ಪ ಹಾಗೂ ಮಲ್ಲಾಪೂರ ಕೆಐ ಸಿಸಿ ರಸ್ತೆ ಕಾಮಗಾರಿಗೆ ಶಾಸಕ ಬಾಬಾಸಾಹೇಬ ಪಾಟೀಲ ಗುದ್ದಲಿ ಪೂಜೆ ನೆರವೇರಿಸಿದರು.



ನಂತರ ಅವರು ಮಾತನಾಡಿ ಸರ್ಕಾರಕ್ಕೇನು ಹಣದ ಕೊರತೆಯಿಲ್ಲ ಹಂತ-ಹಂತವಾಗಿ ಗ್ರಾಮದ ಅಭಿವೃದ್ಧಿ ಮಾಡಿಸುತ್ತೇನೆ. ಒಟ್ಟಾರೆಯಾಗಿ ಕ್ಷೇತ್ರವನ್ನು ಅಭಿವೃದ್ಧಿಪಡಿಸುವುದೇ ಗುರಿ. ಆದ್ದರಿಂದ ಜನರಿಗೆ ವಿವಿಧ ಸೌಕರ್ಯ ಒದಗಿಸುವ ಮೂಲಕ ಅನುಕೂಲ ಮಾಡಿಕೊಡಲಾಗುವುದು. ಈಗಾಗಲೇ 90 ರಷ್ಟು ಸಿಸಿ ರಸ್ತೆ, ಒಳಚರಂಡಿ, ಸಿಡಿ ಸೇರಿದಂತೆ ಕಾಮಗಾರಿಗಳು ಮುಗಿದಿವೆ ಇನ್ನೆರಡು ವರ್ಷಗಳಲ್ಲಿ ಉಳಿದ 10% ಕಾಮಗಾರಿಗಳನ್ನು ಪೂರ್ಣಗೊಳಿಸಿ ಸಮಸ್ಯೆ ಪರಿಹರಿಸಲಾಗುವುದೆಂದರು. ಈ ವೇಳೆ ಮಾಜಿ.ಮ.ಸ.ಸ.ಕಾ. ನಿರ್ದೇಶಕ ಲಕ್ಷ್ಮಣ ಬುರ್ಲಿ ಮಡಿವಾಳಪ್ಪ ಗುಡಗಿ, ನವೀನ ಯಳ್ಳೂರ, ಅಶಪಾಕ ಹವಾಲ್ದಾರ, ಮಂಜುನಾಥ ಗಂಗಪ್ಪನವರ, ಗುತ್ತಿಗೆದಾರರುಗಳಾದ ವಿನಾಯಕ ಮರಡಿ, ಶಿವಯೋಗಿ ದೊಡಮನಿ, ಕೃಷ್ಣಾ ಬಾಳೇಕುಂದರಗಿ, ನಿಂಗಪ್ಪ ಮಾಟ್ಟೋಳ್ಳಿ, ಬಸಯ್ಯಾ ಹಿರೇಮಠ, ಗ್ರಾಮದ ಹಿರಿಯರು, ಸಾರ್ವಜನಿಕರಿದ್ದರು.

# ಬೀಳ್ಕೊಡುಗೆ ಸಮಾರಂಭ



**ಬೆಳಗಾವಿ ವಾರ್ತೆ**

**ನವಲಗುಂದ:** ಅಂಗನವಾಡಿಗಳು ಮಕ್ಕಳಿಗೆ ಎಲ್ಲ ರೀತಿಯ ಶಿಕ್ಷಣ ಹಾಗೂ ಶಿಕ್ಷಣೇತರ ಚಟುವಟಿಕೆಗೆ ಭದ್ರ ಬುನಾದಿಯಾಗಿದ್ದು, ಆರು ವರ್ಷದೊಳಗಿನ ಮಕ್ಕಳನ್ನು ಕಡ್ಡಾಯವಾಗಿ ಅಂಗನವಾಡಿ ಕೇಂದ್ರಕ್ಕೆ ದಾಖಲಿಸಬೇಕೆಂದು ಸಿಡಿಪಿಒ ಗಾಯತ್ರಿದೇವಿ ಪಾಟೀಲ ಮನವಿ ಮಾಡಿದರು.

ಅವರು ಪಟ್ಟಣದಲ್ಲಿರುವ ಅಂಬೇಡ್ಕರ್ ಭವನದಲ್ಲಿ ಎಲ್ಲ ಅಂಗನವಾಡಿ ಮಕ್ಕಳ ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು ಪೌಷ್ಟಿಕತೆ ಹೆಚ್ಚಿಸಲು ಪೋಷಣ ಅಭಿಯಾನ ಯೋಜನೆಯಡಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪ್ರತಿ ತಿಂಗಳು ಹಲವಾರು ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದರು. ನಂತರ ಮಕ್ಕಳಿಂದ ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಮಾಜಿ ಸೈನಿಕ ಗುರುಸಿದ್ದಪ್ಪ ಕಟ್ಟೆಕಾರ, ಮಲ್ಲಿಕಾರ್ಜುನ ಸಂಗನಗೌಡ್ರ, ಮೇಲ್ವಿಚಾರಕಿ, ತುಳಸಾ ಮಳಲಿ, ಗಂಗಮ್ಮ ಹುಳಕನ್ನವರ, ವಸಂತ ಕೊಣ್ಣೂರ, ಅಂಗನವಾಡಿ ಕಾರ್ಯಕರ್ತೆ ಪಾರ್ವತಿ ಚನ್ನಪ್ಪಗೌಡ್ರ, ಭಾರತಿ ಹಳೆಮನಿ, ಗಿರಿಜಾ ಹುಲ್ಲೂರ, ಮಂಜುಳಾ ಒಂಟೆಲಿ ಇತರರು ಇದ್ದರು.

# ಗೌರಿ ಸಸಿ ಹಬ್ಬ

**ಬೆಳಗಾವಿ ವಾರ್ತೆ**

**ಲಕ್ಷೇಶ್ವರ:** ತಾಲೂಕಿನ ಹರದಗಟ್ಟಿ ತಾಂಡಾ ದಲ್ಲಿ ನಿನ್ನೆ ವಿಶಿಷ್ಟವಾದ ಗೌರಿ ಸಸಿ ಹಬ್ಬವನ್ನು ಬಂಜಾರ ಸಮುದಾಯದ ಕನ್ನೆಯರು ಮಹಿಳೆಯರು ಅತ್ಯಂತ ಸಡಗರ ಸಂಭ್ರಮದಿಂದ ಆಚರಿಸಿದರು.



ಯುಗಾದಿ ಅಮಾವಾಸ್ಯೆಯ ದಿನ ಭೂತಾಯಿಗೆ ಪೂಜೆ ಸಲ್ಲಿಸಿ ಚಿಕ್ಕ ಚಿಕ್ಕ ಪಾತ್ರೆಗಳಲ್ಲಿ ಮಣ್ಣು ತಂದು ಅವುಗಳಿಗೆ ಧಾನ್ಯಗಳನ್ನು ಹಾಕಲಾಗುತ್ತದೆ 9 ದಿನಗಳ ಕಾಲ ಮೊಳಕೆಯೊಡದ ನಂತರ ಪ್ರತಿನಿತ್ಯವೂ ಸಂತ ಸೇವಾಲಾಲ ಮತ್ತು ಮರಿಯಮ್ಮ ದೇವಿಯ ಭಜನೆ ಗೀತೆಗಳು ಹಾಡಲಾಗುತ್ತದೆ.

ನಂತರ ಕೊನೆಯ ದಿನ ಗೌರಿ ಸಸಿ ಹೊಳೆಗೆ ಹೋಗುವ ಕಾರ್ಯಕ್ರಮ ನಡೆಯಿತು.

# ಗಂಗಾವತಿ ನಗರಠಾಣೆ ಪಿಐ ಪ್ರಕಾಶ ಮಾಳಿಗೆ ಮುಖ್ಯಮಂತ್ರಿ ಪದಕ



**ಬೆಳಗಾವಿ ವಾರ್ತೆ**

**ಗಂಗಾವತಿ :** ರಾಜ್ಯ ಪೊಲೀಸ್ ಇಲಾಖೆಯಲ್ಲಿನ ಅತ್ಯುತ್ತಮ ಸೇವೆಯನ್ನು ಗುರುತಿಸಿ ನೀಡಲಾಗುವ ಪ್ರತಿಷ್ಠಿತ 2025 ನೇ ಸಾಲಿನ 'ಮುಖ್ಯಮಂತ್ರಿಗಳ ಚಿನ್ನದ ಪದಕ'ಕ್ಕೆ ಗಂಗಾವತಿ ನಗರದ ಪೊಲೀಸ್ ಠಾಣೆ ನಿರೀಕ್ಷಕರಾದ ಪ್ರಕಾಶ ಎಲ್.ಮಾಳಿ ಅವರು ಭಾಜನರಾಗಿದ್ದಾರೆ.

ಅವರು ತಮ್ಮ ಕರ್ತವ್ಯದ ಅವಧಿಯಲ್ಲಿ ತೋರಿದ ನಿಷ್ಠೆ ಮತ್ತು ಸಾಧನೆಯನ್ನು ಪರಿಗಣಿಸಿ ಈ ಗೌರವ ನೀಡಲಾಗಿದೆ.

ಇವರು ಕೊಪ್ಪಳ ರಾಯಚೂರು ಜಿಲ್ಲೆಯಲ್ಲಿ ಪೊಲೀಸ್ ಠಾಣೆಯಲ್ಲಿ ಸಿಪಿಐಯಾಗಿ ಸೇವೆ ಸಲ್ಲಿಸಿ ಹಲವು ವರ್ಷಗಳ ಸೇವೆ ಸಲ್ಲಿದ್ದಾರೆ ನಂತರ ವಿದೇಶಿ ಪ್ರಜೆ ಪ್ರಕರಣದ ಕರಾಳತೆ

ಇತ್ತೀಚೆಗೆ ಜಿಲ್ಲೆಯಲ್ಲಿ ನಡೆದ ವಿದೇಶಿ ಪ್ರಜೆಯ ಮೇಲಿನ ಅತ್ಯಾಚಾರ ಮತ್ತು ಕೊಲೆ ಪ್ರಕರಣ ಇಡೀ ನಾಗರಿಕ ಸಮಾಜವನ್ನೇ ಬೆಚ್ಚಿಬೀಳಿಸಿತ್ತು. ಅಂತರಾಷ್ಟ್ರೀಯ ಮಟ್ಟದಲ್ಲಿ ದೇಶದ ಮಾನ ಹರಾಜಾಗುವ ಆತಂಕವಿದ್ದಾಗ, ತನಿಖಾ ತಂಡಗಳು ಹಗಲಿರುಳು ಶ್ರಮಿಸಿ ಆರೋಪಿಗಳನ್ನು ಪತ್ತೆಹಚ್ಚಿದ್ದು ದೊಡ್ಡ ಸಾಧನೆಯಾಗಿತ್ತು.

ಇಂತಹ ಸವಾಲುಗಳ ಮಧ್ಯೆಯೇ ದಕ್ಷ ಅಧಿಕಾರಿಗಳನ್ನು ಗುರುತಿಸಿ ಸರ್ಕಾರ ಪದಕ ಘೋಷಿಸಿದಕ್ಕೆ ಗಂಗಾವತಿ ನಗರ ಪೊಲೀಸ್ ಠಾಣೆಯ ಸಿಬ್ಬಂದಿಗಳು ಅಭಿನಂದಸಿ ಸನ್ಮಾನಿಸಿ ಗೌರವಿಸಿದರು.

**ಏಪ್ರಿಲ್ 2ಕ್ಕೆ ಪ್ರಧಾನ:**

ರಾಜ್ಯಾದ್ಯಂತ ಒಟ್ಟು 152 ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಪದಕ ಲಭಿಸಿದೆ. ಪದಕ ಪುರಸ್ಕೃತರಿಗೆ ಏಪ್ರಿಲ್ 2ರಂದು ಬೆಂಗಳೂರಿನಲ್ಲಿ ನಡೆಯಲಿರುವ ವಿಶೇಷ ಸಮಾರಂಭದಲ್ಲಿ ಮುಖ್ಯಮಂತ್ರಿಯವರು ಪದಕ ಪ್ರದಾನ ಸ್ವೀಕರಿಸಲಾಗುತ್ತದೆ.

ಈ ಸಂದರ್ಭದಲ್ಲಿ ಪಿಎಸ್ಐ ಟಿ.ಜಿ.ನಾಗರಾಜ, ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರು ಇದ್ದರು.

# ಕಾರ್ಖಾನೆ ಬಾಧಿತ ರೈತ ಸಂಘ ಲಾಂಚನ ಅನಾವರಣ
## ಕಾರ್ಖಾನೆಗಳ ಗೂಂಡಾಗಿರಿ, ಬೆದರಿಕೆ ಸಹಿಸಲ್ಲ: ಅಲ್ಲಮಪ್ರಭು



**ಬೆಳಗಾವಿ ವಾರ್ತೆ**

**ಕೊಪ್ಪಳ :** ನಗರಸಭೆ ಆವರಣದಲ್ಲಿ 148ನೇ ದಿನದ ಬಲ್ಡೋಟ ತೊಲಗಿಸಿ, 22 ಕಾರ್ಖಾನೆ ಬಾಧಿತ ಹಳ್ಳಿಯ ಜನರ ಜೀವ ಉಳಿಸಿ, ಬಸಾಪುರ ಕೆರೆ ಸಾರ್ವಜನಿಕರಿಗೆ ಮುಕ್ತಗೊಳಿಸಿ, ತುಂಗಭದ್ರಾ ಜಲಾಶಯ ನದಿ ನೀರು ವಿಷಗೊಳಿಸಿದ ಕಾರ್ಖಾನೆಗಳನ್ನು ಸೀಜ್ ಮಾಡಬೇಕೆಂದು ನಡೆಸಿರುವ ಅನಿರ್ದಿಷ್ಟಾವಧಿ ಧರಣಿಯಲ್ಲಿ ನೂತನ ಕೊಪ್ಪಳ ಕಾರ್ಖಾನೆ ಬಾಧಿತ ರೈತ ಸಂಘ ಲಾಂಚನ ಅನಾವರಣಗೊಳಿಸಲಾಯಿತು.

ಅವರು ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಮೂಲಕ ನೂತನವಾಗಿ ಅಸ್ತಿತ್ವಕ್ಕೆ ತರಲಿರುವ ರೈತ ಸಂಘದ ಲಾಂಛನ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ, ಪ್ರಧಾನ ಸಂಚಾಲಕರಾದ ಅಲ್ಲಮಪ್ರಭು ಬೆಟ್ಟದೂರು ಅವರು, ಕಾರ್ಖಾನೆ ಬಾಧಿತ 22 ಹಳ್ಳಿಗಳಲ್ಲಿ ಫ್ಯಾಕ್ಟರಿಗಳು ಮಾಲಿನ್ಯ ನಿಗ್ರಹ ಮಾಡಿ ತೋರಿಸಬೇಕು. ಇಲ್ಲವೆ ತಕ್ಷಣದಿಂದಲೇ ಕಾರ್ಖಾನೆ ಮುಚ್ಚಿ ಮಾಲಿನ್ಯ ಹೋಗಲಾಡಿಸಬೇಕು ಎಂದು ಆಗ್ರಹಿಸಿದರು.

ಬಾಧಿತ ಹಳ್ಳಿಗಳಲ್ಲಿ ಕಾರ್ಖಾನೆಗಳು ಗೂಂಡಾಗಿರಿ ಮಾಡುತ್ತಾ ಬೆದರಿಕೆ ಒಡ್ಡುವುದು ಸಹಿಸಿಕೊಳ್ಳಲು ಸಾಧ್ಯವಿಲ್ಲ. ನಮ್ಮ ಪರಿಸರ ಹಾಳು ಮಾಡಿ ನಮ್ಮ ಜನಗಳ ಮೇಲೆ ಹಲ್ಲೆ ನಡೆಸಿದರೆ ತಕ್ಕ ಉತ್ತರವನ್ನು ಚಳವಳಿಯಿಂದ ಕೊಡೋಣ. ಧೈರ್ಯದಿಂದ ದಿಟ್ಟ ನಿಲುವು ತಳೆದು ಪರಿಸ್ಥಿತಿ ಎದುರಿಸೋಣ ಎಂದರು.

ಬಾಧಿತ ಹಳ್ಳಿಗಳಾದ ಹಿರೇಬಗನಾಳ, ಹಾಲವರ್ತಿ, ಕುಣಿಕೇರಿ, ಕಾಸನಕಂಡಿ, ಕುಣಿಕೇರಿ ತಾಂಡಾ, ಲಾಚನಕೇರಿ, ಗಿಣಿಗೇರಿ, ಬಸಾಪುರ ಗ್ರಾಮದ ರೈತರು ಲಾಂಚನ ಬಿಡುಗಡೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ರೈತರು ತಮ್ಮ ಸಮಸ್ಯೆ ಕುರಿತು ಚರ್ಚಿಸಿದರು.

ಸಂಚಾಲಕ ಮಲ್ಲಿಕಾರ್ಜುನ ಬಿ. ಗೋನಾಳ ಅವರು ಸಂಘದ ವ್ಯಾಪ್ತಿ, ಕಾರ್ಯಸೂಚಿ, ಅದರ ದೃಷ್ಟಿಕೋನದ ಕುರಿತು ವಿವರಣೆ ಕೊಟ್ಟು ಮಾತನಾಡಿದರು.

ಸಂಚಾಲಕ ಮಂಜುನಾಥ ಜಿ. ಗೊಂಡಬಾಳ ಮಾತನಾಡಿ, ಲಾಂಛನದಲ್ಲಿ ರೈತನ ಸಮಗ್ರ ಹಕ್ಕು, ಬಾಧನೆ ಎಲ್ಲಾ ಅಡಗಿದೆ. ಇದನ್ನು ಅರ್ಥ ಮಾಡಿಕೊಂಡು ದೃಢವಾಗಿ ಸಂಘ ಕಟ್ಟಿ ಹೋರಾಡೋಣ, ರೈತರ ಐಕ್ಯತೆಗಾಗಿ, ರೈತರ ಹಕ್ಕುಗಳಿಗಾಗಿ, ಕಷ್ಟ ಸುಖಗಳನ್ನು ಅರಿಯಲು ಒಂದು ವೇದಿಕೆಯಾಗಿ ಜಂಟಿ ಕ್ರಿಯಾ ವೇದಿಕೆಯ ಭಾಗವಾಗಿ ರೈತ ಸಂಘ ಇರುತ್ತದೆ ಎಂದರು. ಈ ಸಂದರ್ಭದಲ್ಲಿ ಮಹಿಳಾ ನಾಯಕಿಯರಾದ ಜ್ಯೋತಿ ಎಂ. ಗೊಂಡಬಾಳ, ಕಾವ್ಯ ಪ್ರಸನ್ನ ಗಡಾದ, ಸೌಮ್ಯ ನಾಲ್ವಾಡ, ಬಾಲಕಿ ಅಕ್ಷರ ಎಂ. ಗೊಂಡಬಾಳ ಮಾತನಾಡಿದರು. ಮಾಲಾ ಬಡಿಗೇರ, ಸರೋಜಾ ಬಾಕಳೆ, ಶ್ವೇತಾ ಪಿ. ಅಕ್ಕಿ, ಮೂಕಪ್ಪ ಮೇಸ್ತ್ರಿ ಬಸಾಪುರ, ಯಮನೂರಪ್ಪ ಹಾಲಳ್ಳಿ ಬಸಾಪುರ, ಗವಿಸಿದ್ದಪ್ಪ ಪುಟಗಿ ಹಿರೇಬಗನಾಳ, ಗಣೇಶ ವಿಶ್ವಕರ್ಮ ಹಿರೇಬಗನಾಳ, ಕಾಸನಕಂಡಿ ಗ್ರಾಮದ ಪಕೀರಗೌಡ ಗೊಂದಿಹೊಸಳ್ಳಿ, ಯಂಕಪ್ಪ ಕಬ್ಬೇರ, ಶ್ರೀನಿವಾಸ ಎಚ್. ವಿ, ಕುಣಿಕೇರಿ ಗ್ರಾಮದ ರಮೇಶ್ ಡಂಬ್ರಳ್ಳಿ, ಯಮನೂರಪ್ಪ ಹಳ್ಳಿಕೇರಿ, ಹುಲುಗಪ್ಪ ಭೋವಿ, ಚೆನ್ನವೀರಯ್ಯ ಹಿರೇಮಠ, ಮಂಜುನಾಥ ಮಾಲಿಪಾಟೀಲ್, ಲಾಚನಕೇರಿ ಗ್ರಾಮದ ನಾಗರಾಜ ಕುಷ್ಟಗಿ, ಟೀಕ್ಯಾ ನಾಯ್ಕ್, ಮಂಗಳೇಶ ರಾಠೋಡ, ಹನುಮಂತ ಕಟಿಗಿ, ಗವಿಸಿದ್ದರಡ್ಡಿ ರಡ್ಡೇರ, ಮಾರ್ಕಂಡಯ್ಯ ಹಿರೇಮಠ, ಶಂಕ್ರಪ್ಪ ಹಳ್ಳಿ, ಬಸವರಾಜ ಮೈನಳ್ಳಿ, ಸುಭಾನ್ ಸಾಬ್ ನೀರಲಗಿ, ನಾಗರಾಜ ಹಾಳಕೇರಿ, ಗ್ಯಾನೇಶ ಹ್ಯಾಟಿ ಭಾಗ್ಯನಗರ, ನಟರಾಜ ಸವಡಿ, ಮುಸ್ತಫಾ ಹಾಲವರ್ತಿ, ಪರಮೇಶ್ ಕುರಗಡ್ಡಿ, ಡಿ.ಎಂ. ಬಡಿಗೇರ , ಎಸ್. ಬಿ.ರಾಜೂರು, ಬಿ.ಜಿ.ಕರಿಗಾರ, ಜಿ.ಬಿ. ಪಾಟೀಲ್, ರವಿ ಕಾಂತನವರ, ಶಿವಾನಂದಯ್ಯ ಬೀಳಗಿಮಠ, ಶಾಂತಮ್ಮ ಅಂಗಡಿ, ರಾಜಶೇಖರ ಏಳುಬಾವಿ, ಸಿದ್ದಪ್ಪ ಗೊರವರ, ಗಂಗಾಧರ ಖಾನಾಪುರ, ವೈ. ಶರಣು ಶೆಟ್ಟರ್, ಸಾವಿತ್ರಿ ಮುಜುಮದಾರ, ಸತ್ಯನಾರಾಯಣ, ಇನ್ನು ಮುಂತಾದ ಗ್ರಾಮದ ರೈತರು ಇದ್ದರು.

# ಶಿಕ್ಷಣ ಪ್ರೇಮಿ ಸದ್ದಾಂ ಕಳ್ಳಿಮನಿ ಅವರಿಗೆ ಪ್ರತಿಷ್ಠಿತ ಸೈಮಾ ಅವಾರ್ಡ್‌ಗೆ ಆಯ್ಕೆ

**ಬೆಳಗಾವಿ ವಾರ್ತೆ**

**ಕೊಪ್ಪಳ :** ತಾಲ್ಲೂಕಿನ ಹೊಸಹಳ್ಳಿ ಗ್ರಾಮದ ಸಮಾಜ ಸೇವಕ ಶಿಕ್ಷಣ ಪ್ರೇಮಿ ಸದ್ದಾಂ ಕಳ್ಳಿಮನಿ ಅವರ ಸಾಮಾಜಿಕ ಮತ್ತು ಶೈಕ್ಷಣಿಕ ಸೇವೆಯನ್ನು ಗುರುತಿಸಿ ಸೌತ್ ಇಂಡಿಯಾ ಮೀಡಿಯಾ ಅಸೋಸಿಯೇಷನ್ ವತಿಯಿಂದ ಹೈದರಾಬಾದ್ ನ ಪ್ರತಿಷ್ಠಿತ ಹೊಟೆಲ್ ನಲ್ಲಿ ಆಯೋಜಿಸಿರುವ ಸೈಮಾ ಅವಾರ್ಡ್ ಕಾರ್ಯಕ್ರಮದಲ್ಲಿ ಅತ್ಯುತ್ತಮ ಸಮಾಜಸೇವಕ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತದೆ.

ಅಮ್ಮಾ ಚಾರಿಟೇಬಲ್ ಟ್ರಸ್ಟ್ ಮೂಲಕ ಕೋವಿಡ್ ಸಂದರ್ಭದಲ್ಲಿ ಸಾಕಷ್ಟು ಅಸಹಾಯಕ ದುರ್ಬಲರಿಗೆ,ಅನಾಥರ ಹಸಿವು ನೀಗಿಸಿ ಆಶ್ರಯ ಒದಗಿಸಿ ಆರೋಗ್ಯ ರಕ್ಷಣೆಗಾಗಿ ಸಾಕಷ್ಟು ಸಮಾಜಮುಖಿ ಕಾರ್ಯಗಳ ಮೂಲಕ ಗುರುತಿಸಿಕೊಂಡ 'ವರು ಇತ್ತಿಚಿಗೆ ತಂದೆಯ ಹೆಸರಿನಲ್ಲಿ ಸರ್ಕಾರಿ ಶಾಲಾ ಕಟ್ಟಡ ನಿರ್ಮಿಸಿ ಶೈಕ್ಷಣೀಕ ಪ್ರಗತಿಗೆ ಕಾರಣರಾಗಿದ್ದಾರೆ.

ಕಾರ್ಯಕ್ರಮದಲ್ಲಿ ತೆಲಂಗಾಣ ಸರ್ಕಾರದ ಸಚಿವರಾದ ದನಸಾರಿ ಸೀತಕ್ಕ, ಕೊಂಡಾ ಸುರೇಖಾ, ಚಾಮಲಾ ಕಿರಣ್ ಕುಮಾರ್ ರೆಡ್ಡಿ, ಸಚಿವರಾದ ಬಾಲು ನಾಯ್ಕ, ವೆಮುಲಾ ವಿರೇಶಾಮ್, ಪದ್ಮಶ್ರೀ ರಾಜೇಂದ್ರ ಪ್ರಸಾದ್, ಖ್ಯಾತ ಹಾಸ್ಯ ನಟ ಮೊಹಮ್ಮದ್ ಅಲಿ, ವಿಜಯಕುಮಾರ ರಡ್ಡಿ, ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ, ಶಾಸಕರಾದ ಅಜಯ ಧರ್ಮಸಿಂಗ್, ಪ್ರಭು ಚೌಹಾನ್, ನಾಗೇಂದ್ರ, ಸಂಸದರಾದ



ಸಾಗರ ಖಂಡ್ರೆ, ಖ್ಯಾಟ ನಟ ನಟಿಯರು ಉಪಸ್ಥಿತಿ ಇದ್ದು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

# ಕುಕನೂರಿನಲ್ಲಿ ಧೂಳು ಸಮಸ್ಯೆ: ಕಾಂಕ್ರೀಟ್ ರಸ್ತೆಗೆ ಟಾರ್ ಹಾಸಲು ಮನವಿ



**ಬೆಳಗಾವಿ ವಾರ್ತೆ**

**ಕುಕನೂರು:** ಪಟ್ಟಣದ ಪ್ರಮುಖ ಸಂಚಾರ ಮಾರ್ಗವಾದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಿಂದ ವಿದ್ಯಾನಂದ ಗುರುಕುಲ ಶಾಲೆಯವರೆಗೆ ಇರುವ ಕಾಂಕ್ರೀಟ್ ರಸ್ತೆಯ ಮೇಲೆ ಬಿಟುಮಿನ್ (ಟಾರ್) ಹಾಸುವಂತೆ ಸ್ಥಳೀಯರು ಒತ್ತಾಯಿಸಿದ್ದಾರೆ.

ಕುಕನೂರು ಪಟ್ಟಣ ಹಿತರಕ್ಷಣಾ ಸಮಿತಿ ವತಿಯಿಂದ ಕುಕನೂರಿನ ನೀರಿಕ್ಷಣ ಮಂದಿರದಲ್ಲಿ ಮುಖ್ಯಮಂತ್ರಿ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕರಾದ ಬಸವರಾಜ ರಾಯರೆಡ್ಡಿ ಅವರಿಗೆ ಮನವಿ ಸಲ್ಲಿಸಲಾಗಿದ್ದು, ರಸ್ತೆ ಮೇಲೆ ಹೆಚ್ಚುತ್ತಿರುವ ಧೂಳಿನಿಂದ ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗಿದೆ ಎಂದು ತಿಳಿಸಲಾಗಿದೆ.

ಈ ರಸ್ತೆ ಸುತ್ತ ಮುತ್ತ ಶಾಲೆಗಳು ಹಾಗೂ ವಸತಿ ಪ್ರದೇಶಗಳು ಇರುವುದರಿಂದ ಪ್ರತಿದಿನ ವಿದ್ಯಾರ್ಥಿಗಳು, ಮಹಿಳೆಯರು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸಂಚರಿಸುತ್ತಿದ್ದಾರೆ.

ಆದರೆ ವಾಹನ ಸಂಚಾರದ ಪರಿಣಾಮದಿಂದಾಗಿ ರಸ್ತೆ ಮೇಲೆ ಧೂಳು ಹೆಚ್ಚಾಗಿ ಸಂಗ್ರಹವಾಗುತ್ತಿದ್ದು, ಕಣ್ಣಿನ ಸಮಸ್ಯೆಗಳು, ಶ್ವಾಸಕೋಶ ಕಾಯಿಲೆಗಳು ಹಾಗೂ ಹೃದಯ ಸಂಬಂಧಿತ ಸಮಸ್ಯೆಗಳು ಹೆಚ್ಚುತ್ತಿರುವ ಬಗ್ಗೆ ಆತಂಕ ವ್ಯಕ್ತವಾಗಿದೆ.

ಪಟ್ಟಣ ಪಂಚಾಯಿತಿ ವತಿಯಿಂದ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಗುತ್ತಿದ್ದರೂ, ಸಮಸ್ಯೆಗೆ ಶಾಶ್ವತ ಪರಿಹಾರ ದೊರಕಿಲ್ಲ. ಈ ಹಿನ್ನೆಲೆಯಲ್ಲಿ ಕಾಂಕ್ರೀಟ್ ರಸ್ತೆಯ ಮೇಲೆ "ಬಿಟುಮಿನಸ್ ಓವರ್‌ಲೇ" ವಿಧಾನದಲ್ಲಿ ಟಾರ್ ಹಾಸುವಂತೆ ಮನವಿಯಲ್ಲಿ ಸೂಚಿಸಲಾಗಿದೆ. ಈ ವಿಧಾನದಿಂದ ಧೂಳು ನಿಯಂತ್ರಣವಾಗುವುದು, ವಾಹನ ಸಂಚಾರ ಸುಗಮವಾಗುವುದು ಹಾಗೂ ಸಾರ್ವಜನಿಕರ ಸುರಕ್ಷತೆ ಹೆಚ್ಚುವುದು ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ದೇಶದ ಹಲವು ನಗರಗಳಲ್ಲಿ ಈ ವಿಧಾನ ಯಶಸ್ವಿಯಾಗಿ ಜಾರಿಗೆ ಬಂದಿರುವುದರಿಂದ ಕುಕನೂರಲ್ಲಿಯೂ ಇದನ್ನು ಅನುಸರಿಸಲು ಆಗ್ರಹಿಸಲಾಗಿದೆ.

ಸಾರ್ವಜನಿಕ ಹಿತದೃಷ್ಟಿಯಿಂದ ಸಂಬಂಧಿತ ಇಲಾಖೆ ಶೀಘ್ರ ಕ್ರಮ ಕೈಗೊಂಡು ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕೆಂದು ಸಮಿತಿಯ ಸಹ-ಸಂಚಾಲಕರಾದ ಮಂಜುನಾಥ ನಾಡಗೌಡ್ರು ಸೇರಿದಂತೆ ಅಂದಪ್ಪ ಜವಳಿ, ಕಳಕೇಶ್ ಹತ್ತಿಕಟಗಿ, ರಾಮನಗೌಡ ಅರಿಶಿನಬಿಡಿ, ವಿರೇಶ್ ಸಬರದ್, ಗಂಗಾಧರ್ ನಾರಾಯಣಿ, ಚಂದ್ರು ಬಗನಾಲ್ ಮತ್ತು ಸದಸ್ಯರು ಮನವಿ ಮಾಡಿದ್ದಾರೆ.

# ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ವಿವಿಧ ಬೇಡಿಕೆ ಈಡೇರಿಸುವಂತೆ ಶಾಸಕರಿಗೆ ಮನವಿ

**ಬೆಳಗಾವಿ ವಾರ್ತೆ**

**ಕುಕನೂರು :** ಪಟ್ಟಣದ ಅಂಬೇಡ್ಕರ ನಗರದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ

ಹಳೆ ಬಿಲ್ಡಿಂಗನ್ನು ತೆಗೆದುಹಾಕಿ ಹೊಸ 4 ಕಟ್ಟಡವನ್ನು ಮಂಜೂರು ಮಾಡಿಕೊಡಬೇಕು ಹಾಗೂ ಶಾಲೆಗೆ ಶುದ್ದ ನೀರಿನ ಸರಬರಾಜು, ಶಾಲಾ ಆಟದ ಮೈದಾನ, ಶೌಚಾಲಯ, ಅಡುಗೆ ದಾಸ್ತಾನು ಕೋಣೆ, ವರ್ಗದ ಕೋಣೆಗಳು ಅವಶ್ಯಕತೆ ಇದೆ ಎಂದು ಶಾಲಾ ಎಸ್ ಡಿ ಎಮ್ ಸಿ ಅಧ್ಯಕ್ಷ ಲಕ್ಷ್ಮಣ ಕಾಳಿ ಶಾಸಕ ಬಸವರಾಜ ರಾಯರಡ್ಡಿಯವರಿಗೆ ಶನಿವಾರದಂದು ಮನವಿ ಸಲ್ಲಿಸಿದರು.

ಈ ಕುರಿತು ಶಾಸಕರಿಗೆ ಮನವಿ ಸಲ್ಲಿಸಲಾಗಿದ್ದು ಮನವಿ ಸ್ವೀಕರಿಸಿದ



ಶಾಸಕ ಬಸವರಾಜ ರಾಯರಡ್ಡಿ ಮಾತನಾಡಿ ಸ್ಥಳ ಪರಿಶೀಲಿಸಿ ಮಂಜೂರು ಮಾಡಿಸಿ ಕೊಡಲಾಗುವುದು ಎಂದು ಹೇಳಿದ್ದಾರೆ ಎಂದು ಶಾಲಾ ಸುಧಾರಣಾ ಸಮಿತಿ ಅಧ್ಯಕ್ಷ ಲಕ್ಷ್ಮಣ ಕಾಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಮಾರಕಗಳು ಧಾರ್ಮಿಕ ಪರಂಪರೆ ಪ್ರತೀಕ

**ಬೆಳಗಾವಿ ವಾರ್ತೆ**

ಜಮಖಂಡಿ: ಪ್ರಾಚೀನ ಸ್ಮಾರಕಗಳು ನಮ್ಮ ದೇಶದ ಐತಿಹಾಸಿಕ, ಸಾಂಸ್ಕೃತಿಕ ಹಾಗೂ ಧಾರ್ಮಿಕ ಪರಂಪರೆಯ ಪ್ರತೀಕಗಳಾಗಿವೆ ಎಂದು ಸಂಪನ್ಮೂಲ ವ್ಯಕ್ತಿ, ಇತಿಹಾಸ ವಿಭಾಗ ಮುಖ್ಯಸ್ಥ ಡಾ.ಎನ್.ವಿ.ಅಸ್ಕಿ ಹೇಳಿದರು.

ನಗರದ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರ ಇತಿಹಾಸ ವಿಭಾಗ ಮತ್ತು ಐ.ಕ್ಯೂ.ಎ.ಸಿ. ಪ್ರಾಚೀನ ಸ್ಮಾರಕಗಳು ಮತ್ತು ರಕ್ಷಣೆ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಹಾರಾಷ್ಟ್ರದಲ್ಲಿರುವ ಅಜಂತಾ ಮತ್ತು ಎಲ್ಲೋರಾ ಗುಹೆಗಳು ವಿಶ್ವ ಪ್ರಸಿದ್ಧ ಸ್ಮಾರಕಗಳಾಗಿದ್ದು, ಎಲ್ಲೋರದಲ್ಲಿ ಒಟ್ಟು 34 ಗುಹೆಗಳಿದ್ದು, ಬೌದ್ಧ, ಜೈನ ಮತ್ತು ಹಿಂದೂ ಧರ್ಮಗಳ ಸಂಯೋಜನೆ ತೋರಿಸುತ್ತವೆ. ಅದೇ ರೀತಿ ಬೌದ್ಧಧರ್ಮದ ಪ್ರಸಾರದಲ್ಲಿ ಸರ್ನಾಥ, ರಾಜ್ಗಿರ್ ಹಾಗೂ ನಳಂದಾ ಪ್ರಮುಖ ಕೇಂದ್ರಗಳಾಗಿದ್ದು, ಬೌದ್ಧ ಭಿಕ್ಷುಗಳು ಜ್ಞಾನವನ್ನು ದೇಶದಾದ್ಯಂತ ಪಸರಿಸಿದರು. ಭಾರತದ ವಿವಿಧ ಭಾಗಗಳ ಸಾಂಸ್ಕೃತಿಕ ವೈವಿಧ್ಯತೆಯಲ್ಲಿ ಪಂಜಾಬ ರಾಜ್ಯವು ಐದು ನದಿಗಳಿಂದ ಕೂಡಿರುವುದರಿಂದ ಪಂಜಾಬ ಎಂದು ಕರೆಯಲ್ಪಡುತ್ತದೆ ಎಂದರು.

ಮುಂಬೈ ತಾಜಮಹಲ್ ಹೊಟೇಲ್ ಕೂಡ ಭಾರತದ ಐತಿಹಾಸಿಕ ವಾಸ್ತುಶಿಲ್ಪದ ಒಂದು ಪ್ರಮುಖ ಉದಾಹರಣೆ ಆಗಿದೆ.




ವಾಸ್ತುಶಿಲ್ಪದ ಬೆಳವಣಿಗೆಯಲ್ಲಿ ಗುಪ್ತರಕಾಲದಲ್ಲಿ ಉತ್ತರಭಾರತದಲ್ಲಿ ನಾಗರಶೈಲಿ ಅಭಿವೃದ್ಧಿ ಆಗಿದೆ. ದಕ್ಷಿಣ ಭಾರತದಲ್ಲಿ ದ್ರಾವಿಡ ಶೈಲಿ ಪಿರಾಮಿಡ್ ಆಕಾರದ ಗೋಪುರಗಳಿಂದ ಪ್ರಸಿದ್ಧಿಯಾಗಿದೆ. ವಿಂಧ್ಯಪರ್ವತಗಳು ಉತ್ತರ ಮತ್ತು ದಕ್ಷಿಣಭಾರತದ ವಾಸ್ತುಶೈಲಿಗಳ ನಡುವಿನ ಪ್ರಾಕೃತಿಕ ಗಡಿಯಾಗಿವೆ. ಇಂತಹ ಸ್ಮಾರಕಗಳು ಮತ್ತು ವಾಸ್ತು ಶಿಲ್ಪಗಳು ನಮ್ಮ ಇತಿಹಾಸದ ಜೀವಂತ ಸಾಕ್ಷಿಗಳಾಗಿದ್ದು, ಅವುಗಳ ರಕ್ಷಣೆ ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಸುನಂದಾ ಎಸ್. ಶಿರೂರ ಮಾತನಾಡಿ, ಪ್ರಾಚೀನ ಸ್ಮಾರಕಗಳು ಕೇವಲ ಕಲ್ಲಿನ ಕಟ್ಟಡಗಳಲ್ಲ, ಅವು ನಮ್ಮ ಇತಿಹಾಸದ ಜೀವಂತ ಸಾಕ್ಷಿಗಳಾಗಿವೆ. ಇಂತಹ ಸ್ಮಾರಕಗಳು ನಮ್ಮ ಪೂರ್ವಜರ ಸಂಸ್ಕೃತಿ, ಕಲೆ, ವಾಸ್ತುಶಿಲ್ಪ ಹಾಗೂ ಜೀವನದ ಮೌಲ್ಯಗಳನ್ನು ಪ್ರತಿಬಿಂಬಿಸುತ್ತವೆ. ವಿದ್ಯಾರ್ಥಿಗಳಲ್ಲಿ ಇತಿಹಾಸ ಪ್ರಜ್ಞೆ ವೃದ್ಧಿಯಾಗಬೇಕು. ವಿದ್ಯಾರ್ಥಿನಿಯರು ಪುಸ್ತಕ ಜ್ಞಾನಕ್ಕೆ ಮಾತ್ರ ಸೀಮಿತವಾಗದೆ, ಸ್ಮಾರಕಗಳಿಗೆ ಭೇಟಿಯಾಗಿ ಪ್ರಾಯೋಗಿಕ ಅಧ್ಯಯನ ಬೆಳೆಸಿಕೊಳ್ಳಬೇಕು ತಮ್ಮ ಸುತ್ತಮುತ್ತಲಿನ ಐತಿಹಾಸಿಕ ಸ್ಮಾರಕಗಳನ್ನು ಗುರುತಿಸಿ ಅವುಗಳ ಮಹತ್ವ ಅರಿತುಕೊಳ್ಳಬೇಕು ಎಂದರು.

ವೇದಿಕೆಯಲ್ಲಿ ಡಾ.ಬಿ.ಎಂ.ಕೊರಬು, ಡಾ.ಬಿ.ಎನ್.ಜಾಧ'ವ, ಡಾ.ಎ. ವೈ.ಕಾಂಬಳೆ, ಎಸ್.ಎನ್.ದೇಸ್ತೋಟ, ಡಾ.ಎ. ಐ. ಮಯರ ಸಹಿತ ಹಲವರು ಇದ್ದರು. ಜಯಶ್ರೀಕಡಪಟ್ಟಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಡಾ. ಸಚೀನಕೊಕಟನೂರ ಸ್ವಾಗತಿಸಿದರು. ಸಂಜೀವಕುಮಾರ ನಿರೂಪಿಸಿದರು.

# ಎನ್‌ಎಸ್‌ಎಸ್ ವಾರ್ಷಿಕ ಸೇವಾ ಶಿಬಿರಕ್ಕೆ ಚಾಲನೆ




ಜಮಖಂಡಿ: ಸಮೀಪದ ಮುತ್ತೂರ ಗ್ರಾಮದಲ್ಲಿ ಸ್ಥಳೀಯ ಬಿಎಲ್ ಡಿಇ ಸಂಸ್ಥೆಯ ವಾಣಿಜ್ಯ, ಬಿಎಸ್‌ಸ್ ಕಲೆ ಮತ್ತು ಟಿಜಿಪಿ ವಿಜ್ಞಾನ ಮಹಾವಿದ್ಯಾಲಯದ ಆಶ್ರಯದಲ್ಲಿ ಹಮ್ಮಿಕೊಳ್ಳಲಾದ ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಸೇವಾ ಶಿಬಿರಕ್ಕೆ ಸ್ಥಳೀಯ ರಾಚೋಟೇಶ್ವರ ವಿರಕ್ತ ಮಠದ ಶ್ರೀ ಗುರುಸಿದ್ದೇಶ್ವರ ಮಹಾಸ್ವಾಮಿಗಳು ಬುಧವಾರ ಸಂಜೆ ಚಾಲನೆ ನೀಡಿದರು.

ಈ ವೇಳೆ ಮಾತಾಡಿದ ಅವರು, ಎನ್‌ಎಸ್‌ಎಸ್ ಶಿಬಿರವು ಮುತ್ತೂರ ಗ್ರಾಮದ ಅಭಿವೃದ್ಧಿಗೆ ಸಹಕಾರಿಯಾಗುವುದರ ಜೊತೆಗೆ ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವವನ್ನು ಹೆಚ್ಚಿಸುವಲ್ಲಿ ಮಹತ್ವದ ಪಾತ್ರವಹಿಸಲಿದೆ ಎಂದು ನುಡಿದರು.

ಸಂಸ್ಥೆಯ ಆಡಳಿತಾಧಿಕಾರಿ ಪ್ರೊ.ಎಸ್. ಎಚ್. ಲಗಳಿ ಮಾತನಾಡಿ, ವೈಯಕ್ತಿಕ ಹಿತಾಸಕ್ತಿಗಿಂತ ಸಮಾಜದ ಹಿತವೇ ಮುಖ್ಯ ಎಂಬುದು ಈ ಶಿಬಿರದ ಧ್ಯೇಯವಾಗಿದೆ. ವಿದ್ಯಾರ್ಥಿಗಳಲ್ಲಿ ಸಮಾಜ ಸೇವಾ ಮನೋಭಾವ ಬೆಳೆಸುವ ಉದ್ದೇಶ ಈ ಶಿಬಿರವು ಹೊಂದಿದೆ ಎಂದರು.

ಗ್ರಾ.ಪಂ ಆಡಳಿತಾಧಿಕಾರಿ ಆನಂದ ರತ್ನಾಕರ ಅಧ್ಯಕ್ಷತೆ ವಹಿಸಿದ್ದರು. ಮಹಾಲಕ್ಷ್ಮಿ ದೇವಸ್ಥಾನ ಸಮಿತಿ ಅಧ್ಯಕ್ಷ ಮುತ್ತಣ್ಣ ಹಿಪ್ಪರಗಿ, ಕಾಲೇಜಿನ ಪ್ರಾಚಾರ್ಯ ಡಾ. ಪಿ.ಡಿ.ಪೋಳ, ಉಪ ಪ್ರಾಚಾರ್ಯರಾದ ಡಾ.ಡಿ. ಎಸ್.ನಿಟ್ಟೂರ, ಪ್ರೊ.ಮಲ್ಲಿಕಾರ್ಜುನ ಬೀರಣ್ಣ, ಡಾ.ರವಿಶಂಕರ, ಎನ್‌ಎಸ್‌ಎಸ್ ಸಂಯೋಜಕರಾದ ಡಾ. ತಿಪ್ಪೇಸ್ವಾಮಿ, ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಮತ್ತೊಬ್ಬರ ಕುರಿತು ಸಹನೆ ಮತ್ತು ಅತ್ಯಂತ 'ಕಳವಳ' ವ್ಯಕ್ತಪಡಿಸುವ ಜೀವವೇ ಮಹಿಳೆ: ನ್ಯಾಯಾಧೀಶೆ ಚೈತ್ರಾ ಕುಲಕರ್ಣಿ




**ಬೆಳವಾವಿ ವಾರ್ತೆ**

**ಗೋಕಾಕ:** ಮತ್ತೊಬ್ಬರ ಕುರಿತು ಸಹನೆ ಮತ್ತು ಅತ್ಯಂತ 'ಕಳವಳ' ವ್ಯಕ್ತಪಡಿಸುವ ಜೀವವೇ ಮಹಿಳೆ ಎಂದು ಇಲ್ಲಿನ ಪ್ರಧಾನ ಜೆ.ಎಂ.ಎಫ್.ಸಿ. ನ್ಯಾಯಾಧೀಶೆ ಚೈತ್ರಾ ಕುಲಕರ್ಣಿ ಅರ್ಥೈಸಿದರು.

ಶುಕ್ರವಾರ ಸಂಜೆ ಇಲ್ಲಿನ ನ್ಯಾಯಾಲಯಗಳ ಸಂಕೀರ್ಣದಲ್ಲಿ ವಕೀಲರ ಸಂಘದ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆ'ಯನ್ನು ಪುರುಷರೊಂದಿಗೆ ಹೋಲಿಕೆ ಮಾಡಿದಾಗ ಅವಳು ನೈಸರ್ಗಿಕ ಕಾರಣಗಳಿಂದಾಗಿ ದುರ್ಬಲಳೇ ಹೊರತು ಮತ್ತಾವುದೇ ಕಾರಣಗಳಿಂದಲ್ಲ ಎಂದು ಪ್ರತಿಪಾದಿಸಿದರು.

ಪ್ರಸ್ತುತವಾಗಿ ಪ್ರಪಂಚದಲ್ಲಿ ಮಹಿಳೆಯರು ಪುರುಷ ಸರಿ–ಸಮನಾಗಿ ಕಾರ್ಯ ನಿರ್ವಹಿಸುತ್ತಲೇ ಇರುವುದರಿಂದ ಇನ್ನು ಮಹಿಳಾ ದಿನಾಚರಣೆ ಎಂದು ಆಚರಣೆ ಮಾಡದೇ ಮಾನವರ ದಿನಾಚರಣೆ ಎಂದು ಆಚರಿಸುವುದು ಸೂಕ್ತ ಎಂದು ಅಭಿಪ್ರಾಯಪಟ್ಟರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶ ಮಹಾದೇವ ಕಾನಟ್ಟಿ ಅವರು ಮಾತನಾಡಿ, ಮಹಿಳೆಯರು ತಮ್ಮ ಕೌಶಲ್ಯದ ಮೂಲಕ ಪುರಷರೊಂದಿಗೆ ಪೈಪೋಟಿ ನಡೆಸಿ ಪರಿಶ್ರಮದ ಮೂಲಕ ಎಲ್ಲ ರಂಗಗಳಲ್ಲಿ ಉತ್ತಮ ಸಾಧನೆ ತೋರುತ್ತಿರುವುದನ್ನು ಗಮನಿಸಿದರೆ ಭವಿಷ್ಯದಲ್ಲಿ ಇನ್ನು ಅವರಿಗೆ ಯಾವುದೇ ಮೀಸಲಾತಿ ಕೇಳುವ ಪ್ರಮೇಯವೇ ಬರಲಾರದು. ಪುರಷರೇ ತಮಗೆ ಮೀಸಲಾತಿ ಬೇಕು ಎನ್ನುವ ಮಟ್ಟಿಗೆ ಮಹಿಳೆಯರು ಸರ್ವ ಕ್ಷೇತ್ರಗಳಲ್ಲಿ ಪಾಂಡಿತ್ಯ ಸಾಧಿಸುತ್ತಿದ್ದಾರೆ ಎಂದು ಹೇಳಿದರು.

ಅತಿಥಿ–ಉಪನ್ಯಾಸಕರಾಗಿ ಪಾಲ್ಗೊಂಡಿದ್ದ ವಿವೇಕ ಜಾಗೃತ ಬಳಗದ ದಕ್ಷ ಸೇವಕಿ ಸುಜಾತಾ ರಾಮಕೃಷ್ಣ ಅವರು ಮಾತನಾಡಿ, ಪ್ರೀತಿ–ವಾತ್ಸಲ್ಯ–ಮಮತೆ ಇವೆಲ್ಲವುಗಳ ಭಂಡಾರವೇ ಸ್ತ್ರೀ ಎಂದು ಅಭಿಪ್ರಾಯಿಸಿದರು. ಇನ್ನೋರ್ವ ಅತಿಥಿ ಡಾ. ಕೀರ್ತಿ ಬೀರನಗಡ್ಡಿ ಮತ್ತು ವಕೀಲರ ಸಂಘದ ಅಧ್ಯಕ್ಷ ಎಸ್.ಜಿ. ಬಿ.ಪಾಟೀಲ ಮಾತನಾಡಿದರು. ದಿನಾಚರಣೆ ಪ್ರಯುಕ್ತ ಮಹಿಳೆಯರಿಗಾಗಿ ಏರ್ಪಡಿಸಲಾಗಿದ್ದ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ವಿಜೇತರಿಗೆ ನೆನಪಿನ ಕಾಣಿಕೆ ವಿತರಿಸಲಾಯಿತು.

ವೇದಿಕೆಯಲ್ಲಿ ವಕೀಲರ ಸಂಘದ ಪದಾಧಿಕಾರಿಗಳಾದ ವಿ.ವೈ.ಜಾಗನೂರ, ವಿ.ಬಿ.ಮೆಳವಂಕಿ. ಎ.ಬಿ. ಖಂಡ್ರಟ್ಟಿ, ಬಿ.ಐ.ವಡೇರಹಟ್ಟಿ, ವಿ.ಜಿ.ಸಿದ್ದಾಪೂರಮಠ ಮತ್ತಿತರರು ಇದ್ದರು. ಆರತಿ ನಾಡಗೌಡ ಹಾಗೂ ಬಳಗದವರು ಪ್ರಾರ್ಥಿಸಿದರು. ಸಂಗೀತಾ ಬನ್ನೂರ ಪ್ರಾಸ್ತಾವಿಕ ಮಾತನಾಡಿದರು. ಶಂಕರ ಗೋರೋಶಿ ಸ್ವಾಗತಿಸಿದರು. ಪ್ರತಿಭಾ ನಿಂಬಾಳ್ಕರ ನಿರೂಪಿಸಿ, ವಂದಿಸಿದರು.

# ಜಂಗಮರ ನೋವಿಗೆ ಸ್ಪಂದಿಸಿದ ಶಾಸಕ ಅಲ್ಲಮಪ್ರಭು ಪಾಟೀಲ್ ಶ್ಲಾಘನೀಯ: ಡಾ. ಸಂಜಯ ಹೊಸಮಠ



**ಬೆಳವಾವಿ ವಾರ್ತೆ**

ಬೆಳಗಾವಿ : ವಿಧಾನಸಭೆಯ ಅಧಿವೇಶನದಲ್ಲಿ ಜಂಗಮ ಸಮಾಜದ ಆರ್ಥಿಕ ಸಂಕಷ್ಟಗಳನ್ನು ಎಳೆಎಳೆಯಾಗಿ ಬಿಚ್ಚಿಟ್ಟು, ಸಮಾಜದ ಏಳಿಗೆಗಾಗಿ "ಜಂಗಮ ಅಭಿವೃದ್ಧಿ ನಿಗಮ" ಸ್ಥಾಪಿಸಬೇಕೆಂದು ಪ್ರಬಲವಾಗಿ ಒತ್ತಾಯಿಸಿದ ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರ ನಡೆ ಅತ್ಯಂತ ಸ್ತುತ್ಯಾರ್ಹ ಮತ್ತು ಐತಿಹಾಸಿಕ ಎಂದು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಲದ ನಿರ್ದೇಶಕರು ಹಾಗೂ ಜಂಗಮ ಸಮಾಜದ ಮುಖಂಡರಾದ ಡಾ. ಸಂಜಯ ಹೊಸಮಠ ಅವರು ಪ್ರಶಂಸಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, "ಜಂಗಮ ಸಮಾಜವು ಸಾಂಸ್ಕೃತಿಕವಾಗಿ ಶ್ರೀಮಂತವಾಗಿದ್ದರೂ, ಆರ್ಥಿಕವಾಗಿ ಇಂದು ಕಡು ಕಷ್ಟದಲ್ಲಿದೆ. ಹಿಂದೆ ಹಳ್ಳಿಗಳಲ್ಲಿ ಬೆಳಗಿನ ಜಾವ ಜಾಗೃತಿ ಮೂಡಿಸುತ್ತಿದ್ದ ಈ ಸಮಾಜ, ಬದಲಾದ ಕಾಲಘಟ್ಟದಲ್ಲಿ ಜೀವನೋಪಾಯಕ್ಕಾಗಿ ಪರದಾಡುತ್ತಿದೆ. ಇಂತಹ ಸಮುದಾಯದ ನೈಜ ಸ್ಥಿತಿಯನ್ನು ಅರ್ಥಮಾಡಿಕೊಂಡು, ವಿಧಾನಸಭೆಯ ಇತಿಹಾಸದಲ್ಲೇ ಮೊದಲ ಬಾರಿಗೆ ಅತ್ಯಂತ ಗಂಭೀರವಾಗಿ ಧ್ವನಿ ಎತ್ತಿದ ಏಕೈಕ ಶಾಸಕರು ಅಲ್ಲಮಪ್ರಭು ಪಾಟೀಲರು," ಎಂದು ಹೆಮ್ಮೆಯಿಂದ ಹೇಳಿದ್ದಾರೆ.

"ಸಮಾಜದ ಪರವಾಗಿ ನೀಡಿದ್ದ ಮನವಿಯನ್ನು ಗೌರವಿಸಿ, ಅದನ್ನು ಸದನದ ಗಮನಕ್ಕೆ ತರುವ ಮೂಲಕ ಶಾಸಕರು ಜಂಗಮ ಕುಲದ ಆಶಾಕಿರಣವಾಗಿದ್ದಾರೆ. ಈ ಸಮುದಾಯಕ್ಕೆ ನ್ಯಾಯ ಒದಗಿಸಲು ಅವರು ತೋರುತ್ತಿರುವ ಬದ್ಧತೆ ಅಭಿನಂದನಾರ್ಹ. ರಾಜ್ಯ ಸರ್ಕಾರವು ಇವರ ಆಗ್ರಹವನ್ನು ಗಂಭೀರವಾಗಿ ಪರಿಗಣಿಸಿ, ಕೂಡಲೇ ಜಂಗಮ ಅಭಿವೃದ್ಧಿ ನಿಗಮ ಸ್ಥಾಪಿಸಿ ಅನುದಾನ ಬಿಡುಗಡೆ ಮಾಡಬೇಕು," ಎಂದು ಡಾ. ಸಂಜಯ ಹೊಸಮಠ ಅವರು ಈ ಸಂದರ್ಭದಲ್ಲಿ ಒತ್ತಾಯಿಸಿದ್ದಾರೆ. ಶಾಸಕರ ಈ ಜನಪರ ಕಾಳಜಿಗೆ ಇಡೀ ಜಂಗಮ ಸಮಾಜವು ಸದಾ ಋಣಿಯಾಗಿರಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೃತ್ಯುಂಜಯ ಮಟ್ಟಿ ಅವರ 60ನೆಯ ಜನ್ಮದಿನ ಆಚರಣೆ; ಸನ್ಮಾನ

**ಬೆಳವಾವಿ ವಾರ್ತೆ**

**ಹುಬ್ಬಳ್ಳಿ:** ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಕನ್ನಡ ಸಾಹಿತ್ಯ ಪರಿಷತ್ತು, ಕೆಎಸ್‌ಆರ್‌ಟಿಸಿ ಕ್ರೀಯಾ ಸಮಿತಿ, ಚುಟುಕು ಸಾಹಿತ್ಯ ಪರಿಷತ್ತು, ಬಸವ ಪರಿಸರ ಸಂರಕ್ಷಣಾ ಸಮಿತಿ ಸೇರಿದಂತೆ ಇನ್ನೂ ಹಲವು ಸಂಘಟನೆಗಳಲ್ಲಿ ಪದಾಧಿಕಾರಿಗಳಾಗಿ ಸೇವೆ ಸಲ್ಲಿಸುತ್ತಿರುವ ಮೃತ್ಯುಂಜಯ ಮಟ್ಟಿ ಅವರು 60ನೆಯ ಹುಟ್ಟುಹಬ್ಬದ ಸಂಭ್ರಮದ ಶುಭ ಸಂದರ್ಭದಲ್ಲಿ ಸಾಹಿತ್ಯಿಕ, ದಾರ್ಮಿಕ, ಸಾಮಾಜಿಕ ಸೇವಾ ಕಾರ್ಯಗಳಲ್ಲಿ ನಿರಂತರವಾಗಿ ತೊಡಗಿಸಿ ಕೊಂಡಿರುವ ಬಸವಾಭಿಮಾನಿಗಳು, ಸಮಾಜದ ಮುಖಂಡರು, ಬಂಧುಗಳು, ಆತ್ಮೀಯರಾದ ಮೃತ್ಯುಂಜಯ ಮಟ್ಟಿ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಶಾಲು , ಗ್ರಂಥ ನೀಡಿ, ಮಾಲಾರ್ಪಣೆ ಮಾಡಿ ಗೌರವ ಪೂರ್ವಕವಾಗಿ ಆತ್ಮೀಯತೆಯಿಂದ ಪ್ರೀತಿ, ಹೃದಯ ಸ್ಪರ್ಶಿಯಾಗಿ. ಸನ್ಮಾನಿಸಲಾಯಿತು.

ಪ್ರೀತಿಯಿಂದ ಜನ್ಮದಿನದ ಶುಭಾಶಯಗಳನ್ನು ಕೋರಿದರು. ಪ್ರೀತಿಯ ಮೃತ್ಯುಂಜಯ ಅವರಿಗೆ ದೇವರು ಉತ್ತಮ ಆರೋಗ್ಯ ನೀಡಿ, ಧಾರ್ಮಿಕ , ಸಾಮಾಜಿಕ ಹಾಗೂ ಸಾಹಿತ್ಯ ವಲಯದಲ್ಲಿ ಸೇವೆ ಸಲ್ಲಿಸಲು ಆಶೀರ್ವಾದ ದಯಪಾಲಿಸಲಿ ಎಂದು ಪ್ರಾರ್ಥಿಸಿದ್ದಾರೆ. ಸುಜ ಯ್ ಸುರೇಶ್ ಹೊರಕೇರಿ, ಸೋಹನ್ ಸುರೇಶ್ ಹೊರಕೇ ರಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿ ಯ ಕಾರ್ಯ ದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯ ದರ್ಶಿ , ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಡಾ. ಬಸವಕುಮಾರ ತಲವಾಯಿ, ಅಶೋಕ್, ಮುಂತಾದವರು ಇದ್ದರು.

ವಿದ್ಯಾನಗರದ ರಾಜೀವನಗರದ ರಸ್ತೆಯಲ್ಲಿರುವ ಶ್ರೀ ಕೃಷ್ಣ ಭವನ ಹೋಟೆಲ್‌ನಲ್ಲಿ ಸನ್ಮಾನ ಕಾರ್ಯಕ್ರಮ ನಡೆಯಿತು. ಈ ಹೋಟೆಲಿನಲ್ಲಿ ಒಂದು ವಿಶೇಷತೆ ಎದ್ದು ಕಾಣುತ್ತದೆ ಅದೇನೆಂದರೆ, ಆಹಾರದಲ್ಲಿ



ಕೃತಕ ಬಣ್ಣಗಳನ್ನು ಬಳಸುವುದು ನಿಷೇಧಿಸಿದ್ದಾರೆ. ಒಂದು ಬೋರ್ಡು ಸಹಾ ಹಾಕಲಾಗಿದೆ. ಬೋರ್ಡ್ನಲಿ, ಗ್ರಾಹಕರ ಯೋಗಕ್ಷೇಮಕ್ಕೆ ಆದ್ಯತೆ ನೀಡುವ ಈ ಸಂಸ್ಥೆಯು ಕೃತಕ ಬಣ್ಣಗಳು, ಸುವಾಸನೆಗಳನ್ನೂ ಮತ್ತು ಇತರೆ ಸೇರ್ಪಡೆಗಳನ್ನು ಪ್ರಜ್ಞಾಪೂರ್ವಕವಾಗಿ ತಪ್ಪಿಸುತ್ತದೆ. ಎಂದು ಬರೆಸಲಾಗಿದೆ. ಶ್ರೀ ಕೃಷ್ಣ ಭವನ ಹೋಟೆಲ್ ಮಾಲೀಕರಾದ ಪ್ರಸನ್ನ ಶೆಟ್ಟಿ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಗೌರವಪೂರಕವಾಗಿ ಅಭಿನಂದಿಸಿದರು. ಅವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಲಾಯಿತು. ಎಲ್ಲ ಹೋಟೆಲ್ ಮಾಲೀಕರು ಇಂತಹ ತೀರ್ಮಾನ ಕೈಗೊಳ್ಳಬೇಕು ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯ ದರ್ಶಿ , ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ,ಗ್ರಂಥಪಾಲಕ ಡಾ. ಸುರೇಶ ಡಿ.ಹೊರಕೇರಿಅವರು ವಿನಂತಿಸಿದ್ದಾರೆ.



ಹುಬ್ಬಳ್ಳಿ: ವಿಶ್ವ ರಂಗಭೂಮಿ ದಿನಾಚರಣೆ ಅಂಗವಾಗಿ ನಿರಂತರವಾಗಿ ರಂಗಭೂಮಿಯಲ್ಲಿ ಕೆಲಸ ಮಾಡುತ್ತಿರುವ, ರಂಗಭೂಮಿ ಶ್ರೇಯೋಭಿವೃದ್ಧಿ ಹುಬ್ಬಳ್ಳಿಯ ಅಧ್ಯಕ್ಷರು, ರಂಗರೇಖಾ ಕಲಾ ಬಳಗದ ಅಧ್ಯಕ್ಷ ಬಸವರಾಜ ಚಕ್ರಸಾಲಿ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಪದಾಧಿಕಾರಿಗಳು ಶಾಲು, ಮಾಲಾರ್ಪಣೆ ಮಾಡಿ ಗೌರವದಿಂದ ಆತ್ಮೀಯವಾಗಿ ಸನ್ಮಾನಿಸಿದರು. ಅಭಿನಂದಿಸಿ, ರಂಗಭೂಮಿ ದಿನಾಚರಣೆಯ ಶುಭ ಕೋರಿದರು. ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ , ಹಿರಿಯರಾದ ಸುಭಾಸ್ ನರೇಂದ್ರ, ವೀಣಾ ಅಠವಳೆ , ಸುಭಾಸ ಮೆಹರವಾಡೆ, ಶಿವಣ್ಣ ಪೆರೂರ್ , ರಂಗ ಕಲಾವಿಧರು, ಮುಂತಾದವರು ಇದ್ದರು.

# ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯಿಂದ ಡಿ.ಆರ್. ಪಾಟೀಲ ಅವರಿಗೆ ಸಂಯಮ ಪ್ರಶಸ್ತಿ ಪ್ರದಾನ ನಾಳೆ



ಗದಗ: ಬೆಂಗಳೂರಿನ ಕುಮಾರ ಪಾರ್ಕನ ಗಾಂಧೀ ಭವನದ ಮಹಾದೇವ ದೇಸಾಯಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ವತಿಯಿಂದ ಮಾ. 31ರಂದು ಬೆಳಿಗ್ಗೆ 11ಕ್ಕೆ ಹಮ್ಮಿಕೊಂಡಿರುವ 2023, 2024 ಹಾಗೂ 2025ನೇ ಸಾಲಿನ "ಸಂಯಮ ಪ್ರಶಸ್ತಿ" ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾಜಿ ಶಾಸಕರು, ಕರ್ನಾಟಕ ರಾಜ್ಯ ಯೋಜನೆ ಹಾಗೂ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರು ಹಾಗೂ ಸಂತ ರಾಜಕಾರಣಿ ಎಂದೇ ಖ್ಯಾತರಾಗಿರುವ ಡಿ.ಆರ್. ಪಾಟೀಲ ಅವರಿಗೆ 2023ನೇ ಸಾಲಿನ "ಸಂಯಮ ಪ್ರಶಸ್ತಿ" ಪ್ರಶಸ್ತಿ ಪ್ರದಾನ ಜರುಗಲಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂಯಮ ಪ್ರಶಸ್ತಿ ಪ್ರದಾನ ಮಾಡಲಿದ್ದು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮ್ನ, ಶೋಭಾ ಕರಂದ್ಲಾಜೆ ಅವರು ಘನ ಉಪಸ್ಥಿತಿ ವಹಿಸಲಿದ್ದು, ಶಾಸಕ ರಿಜ್ವಾನ ಅರ್ಷದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಸಚಿವರಾದ ಶರಣಬಸಪ್ಪಗೌಡ ದರ್ಶನಾಪುರ, ಪ್ರಿಯಾಂಕ್ ಖರ್ಗೆ, ಎಸ್.ಎಸ್. ಬೋಸರಾಜು, ಡಾ. ಶರಣಪ್ರಕಾಶ ಪಾಟೀಲ ಪಾಲ್ಗೊಳ್ಳುವರು.

ಇದೇ ವೇಳೆ 2024ನೇ ಸಾಲಿನ ಸಂಯಮ ಪ್ರಶಸ್ತಿ ಬಿ.ಆರ್, ಪಾಟೀಲ, 2025ನೇ ಸಾಲಿನ ಸಂಯಮ ಪ್ರಶಸ್ತಿ ಡಾ ವುಡೇಪಿ ಕೃಷ್ಣಾ ಅವರಿಗೆ ಪ್ರದಾನ ಜರುಗಲಿದೆ. ಡಿ.ಆರ್. ಪಾಟೀಲ ಅಭಿಮಾನಿ ಬಳಗದವರು ಈ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಪಾಲ್ಗೊಳ್ಳಬೇಕು ಎಂದು ವಾಸಣ್ಣ ಕುರುಡುಗಿ, ಗುರಣ್ಣ ಬಳಗಾನೂರ, ವಿದ್ಯಾಧರ ದೊಡ್ಡಮನಿ ಹಾಗೂ ಜೆ.ಕೆ. ಜಮಾದಾರ ಹಾಗೂ ಇತರರು ವಿನಂತಿಸಿದ್ದಾರೆ.

# ದೇಶದ ಗಡಿಯಲ್ಲಿ ನಿಂತು ನಮ್ಮನ್ನು ರಕ್ಷಿಸುತ್ತಿರುವ ಸೈನಿಕರು ನಿಜವಾದ ಹೀರೋಗಳು: ಬಸವರಾಜ ಹಂಚಲಿ




**ಬೆಳವಾವಿ ವಾರ್ತೆ**

**ವಿಜಯಪುರ:** ಸಿನಿಮಾಗಳಲ್ಲಿ ನಟಿಸುವ ನಟ – ನಟಿಯರು ಹೀರೋಗಳಲ್ಲ. ಅವರು ಕೇವಲ ನಟರು ಮಾತ್ರ. ನಿಜವಾದ ಹೀರೋಗಳೆಂದರೆ ನಮ್ಮ ದೇಶಕ್ಕಾಗಿ ಪ್ರಾಣ ಅರ್ಪಣೆ ಮಾಡಿದ ಹೋರಾಟಗಾರರು ಹಾಗೂ ದೇಶದ ಗಡಿಯಲ್ಲಿ ನಿಂತು ನಮ್ಮನ್ನು ರಕ್ಷಿಸುತ್ತಿರುವ ಸೈನಿಕರು ನಿಜವಾದ ಹೀರೋಗಳು ಎಂದು ವಾಗ್ಮಿ ಬಸವರಾಜ ಹಂಚಲಿ ಹೇಳಿದರು.

ನಗರದ ಹುತಾತ್ಮ ವೃತ್ತದಲ್ಲಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಭಗತ್ ಸಿಂಗ್, ರಾಜಗುರು, ಸುಖದೇವ ಅವರ ಬಲಿದಾನ ದಿವಸದ ಅಂಗವಾಗಿ ಹಮ್ಮಿಕೊಂಡಿದ್ದ ಉಘೇ ವೀರಭೂಮಿ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕರಾಗಿ ಮಾತನಾಡಿದ ಅವರು, ಭಾರತದ ದೇಶದ ಶ್ರೇಷ್ಠತೆ ಮತ್ತು ಪರಂಪರೆ ನಮಗೆಲ್ಲ ಪ್ರೇರಣೆ ಆಗಬೇಕು. ಈ ಮೂರು ಜನ ತರುಣರು ತಮ್ಮ ಚಿಕ್ಕ ವಯಸ್ಸಿನಲ್ಲಿ ಭಾರತ ಮಾತೆಯನ್ನು ಬ್ರಿಟಿಷರ ಕಪಿಮುಷ್ಟಿಯಿಂದ ಮುಕ್ತ ಮಾಡಬೇಕೆಂದು ಕ್ರಾಂತಿಕಾರಿ ಹೋರಾಟವನ್ನು ಮಾಡಿದರು. ತಾವು ಗಲ್ಲಿಗೇರುವ ಸಮಯದಲ್ಲಿ ನಗುತ್ತಾ ಘೋಷಣೆಗಳನ್ನು ಮೊಳಗಿಸುತ್ತಾ ಭಯವಿಲ್ಲದೆ ಗಲ್ಲಿಗೇರಿದ ಮಹಾನ್ ರತ್ನಗಳು. ಇವರನ್ನು ಇಂದಿನ ಯುವಕರು ಸ್ಮರಿಸಿಕೊಳ್ಳಬೇಕು. ಇವರು ನಮಗೆ ಪ್ರೇರಣೆ ಆಗಬೇಕು ಎಂದರು.

ಎಬಿವಿಪಿಯ ಕೇಂದ್ರೀಯ ಕಾರ್ಯ ಸಮಿತಿ ಸದಸ್ಯ ಸಚಿನ ಕುಳಗೇರಿ ಮಾತನಾಡಿ, ಭಾರತದ ಸ್ವತಂತ್ರ ಹೋರಾಟದಲ್ಲಿ ಸಾವಿರಾರು ಜನ ಯುವಕರ ಹೋರಾಟ, ಹಾಗೂ ಬಲಿದಾನವಾಗಿದೆ. ಸ್ವಾತಂತ್ರ್ಯ ನಂತರದ ಯುವಶಕ್ತಿ ದೇಶಕ್ಕಾಗಿ ಬದುಕುವ ಅವಶ್ಯಕತೆ ಇದೆ. ಆದರೆ ಇಂದಿನ ಯುವಕರು ಡ್ರಗ್ಸ್, ಗುಟ್ಕಾ, ಮದ್ಯಪಾನಕ್ಕೆ ದಾಸರಾಗಿ ತಮ್ಮ ಅಮೂಲ್ಯ ಶಕ್ತಿಯನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಇದರಿಂದ ದೂರವಾಗಿ, ಸಶಕ್ತ, ಸದೃಢ, ಸ್ವಾಭಿಮಾನಿ ಭಾರತವನ್ನು ನಿರ್ಮಾಣ ಮಾಡುವಲ್ಲಿ ನಾವೆಲ್ಲರೂ ಪಾತ್ರರಾಗಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಡಾ. ವಿಜಯಕುಮಾರ ಭಾವಿ ಮಾತನಾಡಿ, ಸ್ವಾಭಿಮಾನಿ, ಸ್ವದೇಶಿ, ಭಾರತವನ್ನು ನಿರ್ಮಾಣ ಮಾಡಬೇಕು. ನಮ್ಮ ದೇಶ ಇಂದು ಬಹಳಷ್ಟು ಮುಂದುವರೆಯುತ್ತಿದೆ. ಅದಕ್ಕೆ ಯುವಶಕ್ತಿ ಬೆಂಬಲವಾಗಿ ನಿಂತು ವಿಶ್ವಗುರು ಭಾರತವನ್ನು ನಿರ್ಮಾಣ ಮಾಡಬೇಕು. ಈ ರೀತಿಯ ಕಾರ್ಯಕ್ರಮಗಳ ಆಯೋಜನೆ ಮೂಲಕ ಎಬಿವಿಪಿ ವಿದ್ಯಾರ್ಥಿಗಳಲ್ಲಿ ಉತ್ತಮವಾದ ವಿಚಾರವನ್ನು ತುಂಬುವ ಕಾರ್ಯ ಮಾಡುತ್ತಿದೆ ಎಂದರು.

ಎಬಿವಿಪಿಯ ಜಿಲ್ಲಾ ಸಂಚಾಲಕ ಸಂದೀಪ ಅರಳಗುಂಡಿ ಪ್ರಾಸ್ತಾವಿಕವಾಗಿ ಮಾತನಾಡಿದರು, ಪ್ರಾಂತ ಕಾರ್ಯಸಮಿತಿ ಸದಸ್ಯ ಡಾ. ಅಮಿತಕುಮಾರ ಬಿರಾದಾರ, ನಗರ ಕಾರ್ಯದರ್ಶಿ ಸ್ನೇಹಾ ಹಿರೇಮಠ, ವಿಭಾಗ ಸಂಘಟನಾ ಕಾರ್ಯದರ್ಶಿ ಹರ್ಷ ನಾಯಕ, ವಕೀಲರಾದ ಬಸವರಾಜ ಯಾದವಾಡ, ಸಿದ್ದು ಮದರಕಂಡಿ, ಸುರೇಖಾ ಕುಲಕರ್ಣಿ, ಮಂಜುನಾಥ ಹಳ್ಳಿ, ನಾಗೇಶ ಸಿಂಧೆ, ಸುಮಾ ಬೋಳರಡ್ಡಿ, ಓಂಕಾರ ನಾವಿ ಇತರರು ಉಪಸ್ಥಿತರಿದ್ದರು.

ಕಾರ್ಯಕ್ರಮದ ನಂತರ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ವಿದ್ಯಾರ್ಥಿಗಳಲ್ಲಿ ಸ್ಕ್ರಿನ್ ಟೈಂನಿಂದ ಆಕ್ಟಿವಿಟಿ ಟೈಮ್ ಗೆ ಪರಿವರ್ತನೆ ಮಾಡಲು ಎಬಿವಿಪಿ ಹಲವಾರು ಚಟುವಟಿಕೆಗಳನ್ನು ಮಾಡುತ್ತಿದೆ. ವಿದ್ಯಾರ್ಥಿಗಳಲ್ಲಿ ಮೊಬೈಲ್ ಬಳಕೆಯ ಸಮಯವನ್ನು ಕಡಿಮೆ ಮಾಡಿ, ಕ್ರೀಡೆ, ಅಧ್ಯಯನ, ಪರಿಸರ ಕಾಳಜಿ, ರಾಷ್ಟ್ರದ ಪರ ಚಿಂತನೆ ಮಾಡುವ ಮನಃಸ್ಥಿತಿಯನ್ನು ಬೆಳೆಸಿಕೊಳ್ಳಬೇಕು ಎಂದರು.

# ಅಶೋಕ ನಾಲ್ಕು ಭಾಷೆಗಳು ಮೂರು ಲಿಪಿಗಳಲ್ಲಿ ಶಾಸನ ಬರೆಸುತ್ತಾನೆ

**ಬೆಳವಾವಿ ವಾರ್ತೆ**

ವಿಜಯಪುರ: ಅಶೋಕ ಭರತಖಂಡದಲ್ಲಿ ನಾಲ್ಕು ಭಾಷೆಗಳು ಮೂರು ಲಿಪಿಗಳಲ್ಲಿ ಶಾಸನ ಬರೆಸುತ್ತಾನೆ ಎಂದು ಖ್ಯಾತ ಶಾಸನ ತಜ್ಞ ಡಾ. ದೇವರಕೊಂಡ ರೆಡ್ಡಿ ಹೇಳಿದರು.

ನಗರದ ಚೇತನಾ ಕಾಲೇಜು ಸಭಾ ಭವನದಲ್ಲಿ ಶನಿವಾರ ಸಂಜೆ ನಡೆದ ಅಖಿಲ ಭಾರತೀಯ ಸಾಹಿತ್ಯ ಪರಿಷದ್(ರಿ) ವಿಜಯಪುರ ಜಿಲ್ಲಾ ಸಮಿತಿ ಆಯೋಜನೆಯ ಭರತಖಂಡದಲ್ಲಿನ ಅಶೋಕನ ಶಾಸನಗಳು ವಿಷಯದ ಮೇಲೆ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಸಾಮ್ರಾಟ ಅಶೋಕನಿಗಿಂತ ಪೂರ್ವದಲ್ಲಿ ಭಾರತದಲ್ಲಿ ಗಟ್ಟಿಯಾದ ವಸ್ತುಗಳ ಮೇಲೆ ಬರವಣಿಗೆ ನಿಷಿದ್ಧವಾಗಿತ್ತು. ಪರ್ಷಿಯಾ , ಗ್ರೀಕ್ ಪ್ರಭಾವ ಅಶೋಕ ಗಟ್ಟಿಯಾದ ಬಂಡೆಗಲ್ಲಗಳ ಮೇಲೆ ಶಾಸನಗಳನ್ನು ಬರೆಸಿದ. ಕರ್ನಾಟಕದಲ್ಲಿ ಒಟ್ಟು ಏಳು ಅಶೋಕನ ಶಾಸನಗಳು ಸಿಕ್ಕಿವೆ. ವಿಶೇಷವೆಂದರೆ ಉಳಿದ ಕಡೆಗಳಲ್ಲಿ ದೇವನಾಂಪ್ರಿಯ ಪ್ರಿಯದರ್ಶಿ ಅಂತಿದ್ದರೆ ಕರ್ನಾಟಕ ಮಸ್ಕಿ ಸೇರಿದಂತೆ ಅನೇಕ ಕಡೆ ದೇವನಾಪ್ರಿಯ ಪ್ರಿಯದರ್ಶಿ ರಾಜ ಅಶೋಕ ಅಂತಿದೆ ಎಂದು ಶಾಸನಗಳು ಕುರಿತು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಭಾಸಾಪ ಜಿಲ್ಲಾಧ್ಯಕ್ಷ ವಿವೇಕ ಕುಲಕರ್ಣಿ ವಹಿಸಿದ್ದರು. ವಿದ್ಯಾವತಿ ಬೆಣ್ಣೂರು ನಿರೂಪಿಸಿದರು. ಶ್ರೀರಂಗ ಕುಲಕರ್ಣಿ



ಸ್ವಾಗತಿಸಿದರು.ವಿಠ್ಠಲ ಜಾಧವ ನಿರೂಪಿಸಿದರು. ಆನಂದ ಗೋಡಸೆ, ಸುಕಾಂತ ಕುಲಕರ್ಣಿ, ರಮೇಶ ಕುಲಕರ್ಣಿ , ಶ್ರೀರಂಗ ಪುರಾಣಿಕ , ಗರೀಶ ಹನುಮಂತ ರೆಡ್ಡಿ , ವಿಶ್ವನಾಥ ದಬಾಡೆ , ಭಾರತಿ ಗೋಡಸೆ , ಗೀತಾ ವೈದ್ಯ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕಲಹಳ್ಳಿ ಅರಣ್ಯದಲ್ಲಿ ವ್ಯಕ್ತಿಯ ಕೊಳೆತ ಶವ ಪತ್ತೆ – ಕೊಲೆ ಶಂಕೆ



**ಬೆಳವಾವಿ ವಾರ್ತೆ**

ಜಮಖಂಡಿ: ಜಮಖಂಡಿ ತಾಲ್ಲೂಕಿನ ಕಲಹಳ್ಳಿ ಗ್ರಾಮದ ಸಿದ್ದಾಪುರ ರಸ್ತೆಯ ಅರಣ್ಯ ಪ್ರದೇಶದಲ್ಲಿ ವ್ಯಕ್ತಿಯೊಬ್ಬರ ಕೊಳೆತ ಸ್ಥಿತಿಯ ಶವ ಪತ್ತೆಯಾಗಿದ್ದು, ಕೊಲೆ ಶಂಕೆ ವ್ಯಕ್ತವಾಗಿದೆ.

ಮೃತ ವ್ಯಕ್ತಿಯನ್ನು ರಬಕವಿ–ಬನಹಟ್ಟಿ ತಾಲೂಕಿನ ನಾವಲಗಿ ಗ್ರಾಮದ ಈರಪ್ಪಾ ಅಲ್ಲಪ್ಪಾ ಇಕ್ಕಡಿ (ವಯಸ್ಸು 40) ಎಂದು ಗುರುತಿಸಲಾಗಿದೆ. ಸ್ಥಳೀಯರು ಗಮನಿಸಿ ಪೊಲೀಸರಿಗೆ ಮಾಹಿತಿ ನೀಡಿದ ಹಿನ್ನೆಲೆಯಲ್ಲಿ ತಕ್ಷಣವೇ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಘಟನಾ ಸ್ಥಳಕ್ಕೆ ಸಿಪಿಐ ಮಲ್ಲಪ್ಪ ಮಡ್ಡಿ ಹಾಗೂ ಪಿಎಸ್‌ಐ ಗಂಗಾಧರ ಪೂಜೆರಿ ಅವರ ನೇತೃತ್ವದ ಪೊಲೀಸ್ ತಂಡ ಭೇಟಿ ನೀಡಿ ಶವವನ್ನು ಪರಿಶೀಲಿಸಿ, ಮರಣೋತ್ತರ ಪರೀಕ್ಷೆಗಾಗಿ ಸರಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ.

ಈ ಸಂಬಂಧ ಜಮಖಂಡಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ. ಈ ವೇಳೆ ಅರಣ್ಯ ಗಸ್ತು ಪಾಲಕ ಈರಣ್ಣ ಪೊದ್ದಾರ ಹಾಗೂ ಪೊಲೀಸ್ ಸಿಬ್ಬಂದಿಗಳಾದ ಆದಿನಾಥ ಸದಲಗಿ, ಸಿದ್ದು ಸನಗೌಡರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307 . Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001